ಸಂಪುಟ : 10 ಸಂಚಿಕೆ: 249 ಪುಟ : 4+2 ಬೆಲೆ: 3.00 ಶನಿವಾರ ನವೆಂಬರ್ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 249 Pages : 4+2 Price : 3.00 Saturday November 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಬಿಹಾರ, ನಾಳೆ ಕರ್ನಾಟಕ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಪಕ್ಷದ ವಿರುದ್ಧ ಪದೇ ಪದೇ ಕಾಂಗ್ರೆಸವು ವೋಟ್ ಚೋರಿ ಮೂಲಕ ಅಧಿಕಾರ ಪಡೆದಿದೆ ಎಂದು ಆರೋಪಿಸಿದ್ದಕ್ಕೆ ಮತದಾರರು ಎನ್‌ಡಿಎ ಕೂಟಕ್ಕೆ ಸ್ಪಷ್ಟ ಬಹುಮತ ನೀಡುವ ಮೂಲಕ ವೋಟ್ ಚೋರಿಕೋರರರನ್ನು ವಿಳಾಸವಿಲ್ಲದಂತೆ ಮಾಡಿದ್ದಾರೆ, ಇದೇ ರೀತಿ 2028ರ ಕರ್ನಾಟಕ ವಿಧಾನಸಭಾ ಚುನಾವಣೆಯ ಎಲ್ಲ ಕ್ಷೇತ್ರದಲ್ಲೂ ಬಿಜೆಪಿ ತನ್ನ ಬಾವುಟ ಹಾರಿಸುತ್ತದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಳೆದ ಎರಡು ವರ್ಷಗಳ ಅವಧಿಯಲ್ಲಿ ಜನಮನ್ನಣೆ ಕಳೆದುಕೊಂಡಿರುವ ಕಾಂಗ್ರೆಸ್ ಪಕ್ಷ ಕರ್ನಾಟಕದಲ್ಲೂ ಧೂಳೀಪಟ ಆಗಿ ಕಮಲ ಅರಳುವುದು ಗ್ಯಾರಂಟಿ ಎಂದು ಹೇಳಿದ್ದಾರೆ. ಆದ್ದರಿಂದಲೇ ರಾಹುಲ್ ಗಾಂಧಿ ಮುಖಭಂಗ ತಪ್ಪಿಸಿಕೊಳ್ಳಲು ವೋಟ್ ಚೋರಿ ಎಂಬ ಕಟ್ಟುಕಥೆ ಮೂಲಕ ಜನರ ದಿಕ್ಕು ತಪ್ಪಿಸಲು ಹೊರಟಿದ್ದು. ಕಾಂಗ್ರೆಸ್ ಪಕ್ಷ ಮತ್ತು ರಾಹುಲ್ ಗಾಂಧಿ ಅವರ ವೋಟ್ ಚೋರಿ ಪ್ರಹಸನವನ್ನು ಸಾರಾಸಗಟಾಗಿ ತಿರಸ್ಕರಿಸಿ ಪ್ರಧಾನಿ ನರೇಂದ್ರ ಮೋದಿ ಹಾಗೂ ನಿತೀಶ್ ಕುಮಾರ್ ಅವರ ನೇತೃತ್ವದ ಎನ್‌ಡಿಎ ಮೈತ್ರಿಕೂಟಕ್ಕೆ ಮತ್ತೊಮ್ಮೆ ಸ್ಪಷ್ಟ ಜನಾದೇಶ ನೀಡಿದ್ದಾರೆ. ಈಗಲಾದರೂ ಕಾಂಗ್ರೆಸ್ ನಿದ್ದೆಯಿಂದ ಎದ್ದೇಳಬೇಕು, ದೇಶದ ಮತದಾರರು ಪ್ರಜ್ಞಾವಂತರಾಗಿದ್ದಾರೆ ಎಂದಿದ್ದಾರೆ.

## ಶಿರಹಟ್ಟಿಯಲ್ಲಿ ಬಿಜೆಪಿ ವಿಜಯೋತ್ಸವ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷವು ಐತಿಹಾಸಿಕ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಶುಕ್ರವಾರ ಶಿರಹಟ್ಟಿಯ ಬಸವೇಶ್ವರ ವೃತ್ತದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಪಕ್ಷದ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ ಚಂದ್ರು ಲಮಾಣಿ, ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತವನ್ನು ಮೆಚ್ಚಿ ಬಿಹಾರದ ಜನತೆ ಐತಿಹಾಸಿಕ ಗೆಲುವನ್ನು ತಂದುಕೊಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿಯೂ ಸಹ ಇದೇ ರೀತಿ ಪಕ್ಷವು ಗೆಲುವು ಸಾಧಿಸಲಿದೆ ಎಂದರು.

ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಫಕ್ಕೀರೇಶ ರಟ್ಟಿಹಳ್ಳಿ, ಬಸವರಾಜ ಪಲ್ಲೇದ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಶಂಕರ ಮರಾಠೆ, ರಾಮಣ್ಣ ಕಂಬಳಿ, ತಿಮ್ಮರಡ್ಡಿ ಮರಡ್ಡಿ, ಜಾನು ಲಮಾಣಿ, ಸಂದೀಪ ಕಪ್ಪತ್ತನವರ, ಗೂಳಪ್ಪ ಕರಿಗಾರ ಮುಂತಾದವರು ಉಪಸ್ಥಿತರಿದ್ದರು.

## ವೃಕ್ಷಮಾತೆ ಪದ್ಮಶ್ರೀ ಪುರಸ್ಕೃತೆ ಸಾಲುಮರದ ತಿಮ್ಮಕ್ಕ ಇನ್ನಿಲ್ಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಉಸಿರಾಟದ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ಚಿಕಿತ್ಸೆ ಫಲಕಾರಿಯಾಗದೆ ನವೆಂಬರ್ 14, ಶುಕ್ರವಾರದಂದು ನಿಧನರಾಗಿದ್ದಾರೆ. ಅವರಿಗೆ 114 ವರ್ಷ ವಯಸ್ಸಾಗಿತ್ತು.

ಬೆಂಗಳೂರಿನ ಜಯನಗರದ ಖಾಸಗಿ ಆಸ್ಪತ್ರೆಯಲ್ಲಿ ತಿಮ್ಮಕ್ಕ ಕೊನೆಯುಸಿರೆಳೆದಿದ್ದಾರೆ.

### ಮಕ್ಕಳ ದಿನಾಚರಣೆ ನಿಮಿತ್ತ ಪೋಷಕ-ಶಿಕ್ಷಕರ ಮಹಾಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ಶಿಕ್ಷಕರು ಮಕ್ಕಳನ್ನು ತಿದ್ದುವ ಮಾಂತ್ರಿಕರು

■ವಿಜಯಸಾಕ್ಷಿ ಸುದ್ದಿ, ಗದಗ

ಪಂಡಿತ ಜವಾಹರ ಲಾಲ್ ನೆಹರು ಹಾಗೂ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಕೊಡುಗೆ ಅನನ್ಯ. ಮಾಜಿ ಪ್ರಧಾನಿ ನೆಹರೂ ಅವರು ತಮ್ಮ ಜನ್ಮ ದಿನಾಚರಣೆಯನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲು ಬಯಸಿದರು. ಅದೇ ರೀತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸುವಂತೆ ತಿಳಿಸುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಅನನ್ಯ ಕೊಡುಗೆ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಶಹರ ವಲಯ ಗದಗ ಸಹಯೋಗದಲ್ಲಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ಪ್ರಸಕ್ತ ಸಾಲಿನ ಮಕ್ಕಳ ದಿನಾಚರಣೆ ನಿಮಿತ್ತ ಏರ್ಪಡಿಸಿದ್ದ ಪೋಷಕ-ಶಿಕ್ಷಕರ ಮಹಾಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಲೆಗಳಲ್ಲಿ ನಾಳೆಯನ್ನು ಕಾಣುವವರು ನಾವುಗಳಾದರೆ, ಮಕ್ಕಳ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಹೊತ್ತವರು ಶಾಲಾ ಶಿಕ್ಷಕರು ದೇಶದ ನಾಳೆಗಳನ್ನು ನಿರ್ಮಿಸುವ ಕಾರ್ಖಾನೆಗಳಿದ್ದಂತೆ. ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡಿ ಮಕ್ಕಳನ್ನು ತಿದ್ದಿ-ತೀಡಿ ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಲಿದ್ದಾರೆ. ಮಕ್ಕಳನ್ನು ತಿದ್ದುವ ಮಾಂತ್ರಿಕ ಶಿಕ್ಷಕ ಎಂದು ಅಭಿಪ್ರಾಯಪಟ್ಟರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ಮಕ್ಕಳ ಹಕ್ಕುಗಳಿಗೆ ಅವರ ಕನಸುಗಳಿಗೆ ಗೌರವ ನೀಡುವ ದಿನ ಇದಾಗಿದೆ. ಈ ವಿಶೇಷ ದಿನವನ್ನು ಭಾರತದ ಪ್ರಥಮ ಪ್ರಧಾನಿ ಪಂಡಿತ ಜವಾಹರಲಾಲ ನೆಹರು ಅವರ ಜನ್ಮದಿನಾಚರಣೆ ಅಂಗವಾಗಿ ಆಚರಿಸುತ್ತೇವೆ. ನೆಹರೂಜಿ ಮಕ್ಕಳನ್ನು ಮನಸಾರೆ ಪ್ರೀತಿಸುತ್ತಿದ್ದರು. ಮಕ್ಕಳ ಖುಷಿಯಲ್ಲಿ ರಾಷ್ಟ್ರದ ಭವಿಷ್ಯ ಅಡಗಿದೆ ಎಂದು ಪದೇ ಪದೇ ಹೇಳುತ್ತಿದ್ದರು. ಅದಕ್ಕಾಗಿಯೇ ಮಕ್ಕಳು ಅವರನ್ನು ಚಾಚಾ ನೆಹರೂ ಎಂದು ಕರೆಯುತ್ತಿದ್ದರು ಎಂದು ಹೇಳಿದರು.

ಮಕ್ಕಳ ಹಕ್ಕುಗಳಿಗೆ ಸಂಬಂಧಿಸಿದಂತೆ ವಿವಿಧ ಕಾಯ್ದೆಗಳ ಬಗ್ಗೆ ಪೋಷಕರಿಗೆ ಅರಿವು ಮೂಡಿಸುವುದು, ಆರ್.ಟಿ.ಐ, ಪೋಕ್ಸೋ, ಮಕ್ಕಳ ರಕ್ಷಣಾ ನೀತಿ, ಬಾಲ್ಯ ವಿವಾಹ ನಿಷೇಧ, ಬಾಲ ಕಾರ್ಮಿಕ ಪದ್ಧತಿ ಕುರಿತು ತಿಳಿಸಿಕೊಡುವ ಸಂಗಮ ಈ ಮಹಾಸಭೆಯಾಗಿದೆ ಎಂದು ನುಡಿದರು.

> ಮಕ್ಕಳು ವಿದ್ಯಾಭ್ಯಾಸದ ಸಮಯದಲ್ಲಿ ದುಶ್ಚಟಗಳಿಗೆ ಬಲಿಯಾಗಬಾರದು. ಧೂಮಪಾನ, ಮದ್ಯಪಾನದಂತಹ ಸಮಾಜದ ಸ್ವಾಸ್ಥ್ಯ ಹಾಳು ಮಾಡುವ ಚಟಗಳಿಗೆ ದಾಸರಾಗದೇ ವಿದ್ಯಾರ್ಜನೆಯೊಂದನ್ನೇ ಗುರಿಯಾಗಿಸಿಕೊಂಡು ಮುನ್ನಡೆಯಬೇಕು. ವಿದ್ಯಾರ್ಜನೆಯಲ್ಲಿ ಉತ್ಸಾಹ ಹೊಂದಿ ಶ್ರದ್ಧೆಯಿಂದ ಅಭ್ಯಸಿಸುವ ದೃಢ ನಿರ್ಧಾರ ನಿಮ್ಮದಾದಲ್ಲಿ ನಿಮ್ಮ ಮುಂದಿನ ಜೀವನ ಉತ್ತಮವಾಗಿರಲಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಈ ಸಂದರ್ಭದಲ್ಲಿ ಅವ್ವ ಟ್ರಸ್ಟ್ ರಾಜ್ಯ ಸಂಚಾಲಕ ಡಾ. ಬಸವರಾಜ ಧಾರವಾಡ, ಎಸ್.ಡಿ.ಎಂ.ಸಿ ಅಧ್ಯಕ್ಷೆ ನಂದಾ ಕಟವಟಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ವಯಸ್ಕರ ಶಿಕ್ಷಣಾಧಿಕಾರಿ ಶಿವಕುಮಾರ ಕುರಿಯವರ, ಬಿ.ಇ.ಓ ರವಿಂದ್ರ ಶೆಟ್ಟೆಪ್ಪನವರ, ವಾರ್ತಾಧಿಕಾರಿ ವಸಂತ ಮಡ್ಲೂರ, ರವಿ, ಶಾಲೆಯ ಮುಖ್ಯೋಪಾಧ್ಯಾಯೆ ಜೆ.ಬಿ. ಅಣ್ಣಿಗೇರಿ, ನಗರಸಭೆಯ ಪರಿಸರ ಅಧಿಕಾರಿ ಆನಂದ ಬದಿ, ಶಾಲಾ ವಿದ್ಯಾರ್ಥಿ ಸಂಘಗಳ ಪ್ರಧಾನಿ ರುತ್ತೂರ ಗೌಡ, ಉಪಪ್ರಧಾನಿ ತೇಜಸ್ವಿನಿ ಕಟಗಿ ಸೇರಿದಂತೆ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಹಾಜರಿದ್ದರು.

ಕ್ರೀಡಾ ಸಾಧನೆ ಹಾಗೂ ಅತೀ ಹೆಚ್ಚು ಅಂಕ ಪಡೆದ ಶಾಲಾ ವಿದ್ಯಾರ್ಥಿಗಳನ್ನು ಅತಿಥಿಗಳು ಸತ್ಕರಿಸಿ ಗೌರವಿಸಿದರು. ಜೊತೆಗೆ ತಾರೆ ಜಮೀನ್ ಪರ್ ಸಂಸ್ಥೆಯಿಂದ ವಿದ್ಯಾರ್ಥಿಗಳಿಗೆ ವಿಜ್ಞಾನದ ಕಿಟ್ ವಿತರಿಸಲಾಯಿತು. ವಿದ್ಯಾರ್ಥಿಗಳು ನೃತ್ಯ, ಗೀತೆ ಬಾಷಣ ಮುಂತಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು.

### ತಂಬಾಕು ಮುಕ್ತ ಯುವ ಅಭಿಯಾನ 3.0ಕ್ಕೆ ಡಿಸಿ ಸಿ.ಎನ್. ಶ್ರೀಧರ್ ಚಾಲನೆ

# ಅಭಿಯಾನದ ಸಮರ್ಪಕ ಅನುಷ್ಠಾನಕ್ಕೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ತಂಬಾಕು ಮುಕ್ತ ಯುವ ಅಭಿಯಾನ 3.0ಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಿಲ್ಲೆಯಲ್ಲಿ ತಂಬಾಕು ಮುಕ್ತ ಯುವ ಅಭಿಯಾನ 3.0ನ್ನು ಅಕ್ಟೋಬರ್ 9ರಿಂದ ಡಿಸೆಂಬರ್ 9ರವರೆಗೆ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಸಮನ್ವಯತೆ ಹಾಗೂ ಸಹಕಾರ ಅಗತ್ಯವಾಗಿದೆ. ಜಿಲ್ಲೆಯನ್ನು ತಂಬಾಕು ಮುಕ್ತ ಜಿಲ್ಲೆಯಾಗಿಸುವುದು, ಯುವಜನರಲ್ಲಿ ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವುದು ಹಾಗೂ ತಂಬಾಕು ವ್ಯಸನಕ್ಕೆ ಒಳಗಾಗಿರುವ ಯುವಜನರನ್ನು ವ್ಯಸನದಿಂದ ಹೊರಬರಲು ಪ್ರೋತ್ಸಾಹಿಸುವುದು ಈ ಅಭಿಯಾನದ ಮುಖ್ಯ ಉದ್ದೇಶಗಳಾಗಿವೆ ಎಂದರು.


ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ಹಾಗೂ ಶ್ವಾಸ ಸಂಬಂಧಿ ಅನೇಕ ಕಾಯಿಲೆಗಳು ಬರುತ್ತವೆ. ಜಿಲ್ಲೆಯಲ್ಲಿ 400 ಶಾಲಾ /ಕಾಲೇಜುಗಳನ್ನು ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಯನ್ನಾಗಿ ಘೋಷಿಸುವ ಗುರಿ ಹೊಂದಲಾಗಿದೆ ಎಂದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ಜಿಲ್ಲೆಯ ಶಾಲಾ-ಕಾಲೇಜುಗಳಲ್ಲಿ ತಂಬಾಕುಮುಕ್ತ ಯುವ ಅಭಿಯಾನ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪೊಲೀಸ್ ಇಲಾಖ್ಯ ಸಹಕಾರದೊಂದಿಗೆ ಕೋಟ್ಪಾ ದಾಳಿ ಹಾಗೂ ಸಮುದಾಯ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ. ಮೀನಾಕ್ಷಿ, ಡಾ. ವೈ.ಕೆ. ಭಜಂತ್ರಿ, ಡಾ. ರಾಜೇಂದ್ರ ಬಸರಿಗಿಡದ, ಡಾ. ಗಿರಡ್ಡಿ, ಡಾ. ಅರುಂಧತಿ ಕುಲಕರ್ಣಿ, ತಾಲೂಕಾ ವೈದ್ಯಾಧಿಕಾರಿಗಳು, ಗೋಪಾಲ ಸುರಪುರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> **ತಂಬಾಕಿನ ಜಾಗತಿಕ ಸತ್ಯಾಂಶಗಳು**
>
> * ವಿಶ್ವದಾದ್ಯಂತ ತಡೆಗಟ್ಟಬಹುದಾದ ಖಾಯಿಲೆ ಮತ್ತು ಮರಣಗಳಿಗೆ (ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಶ್ವಾಸಕೋಶದ ಕಾಯಿಲೆಗಳು) ತಂಬಾಕು ಸೇವನೆಯೇ ಪ್ರಮುಖ ಕಾರಣವಾಗಿದೆ.
> * ಪ್ರತಿ ವರ್ಷ ವಿಶ್ವದಾದ್ಯಂತ 6 ಸೆಕೆಂಡುಗಳಿಗೊಬ್ಬರಂತೆ 60 ಲಕ್ಷಕ್ಕಿಂತ ಹೆಚ್ಚು ಜನರು ತಂಬಾಕು ಸೇವನೆಯಿಂದ ಉಂಟಾಗುವ ಕಾಯಿಲೆಗಳಿಂದ ಸಾವನ್ನಪ್ಪುತ್ತಿದ್ದಾರೆ.
> * ತಂಬಾಕು ಸೇವನೆ ಮಾಡುವವರು ತಂಬಾಕು ಸೇವನೆ ಮಾಡದವರಿಗಿಂತ 10 ವರ್ಷ ಹೆಚ್ಚು ವಯಸ್ಸಾದವರಂತೆ ಕಾಣುತ್ತಾರೆ.

## ಇಲಾಖಾವಾರು ಅವಶ್ಯಕ ಬೇಡಿಕೆಗಳ ಪಟ್ಟಿ ಸಲ್ಲಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆ ತಯಾರಿಕೆಗಾಗಿ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಗೆ ಅವಶ್ಯಕವಾಗಿರುವ ಬೇಡಿಕೆಗಳನ್ನು ಪಟ್ಟಿ ಮಾಡಿ ಸಲ್ಲಿಸಬೇಕು. ಕಚೇರಿಯಲ್ಲಿರುವ ಸಮಸ್ಯೆ ಹಾಗೂ ಬೇಕಾಗಿರುವ ಅನುದಾನದ ಕುರಿತು ಚರ್ಚಿಸಿ ಜಿಲ್ಲೆಗೆ ಬೇಕಾಗಿರುವ ಅನುದಾನ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ವಿವಿಧ ವಿಷಯಗಳ ಬಗ್ಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂದಿನ ವಾರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರ ಅಧ್ಯಕ್ಷತೆಯಲ್ಲಿ ಜಿಲ್ಲಾ ಯೋಜನಾ ಸಮಿತಿ ಸಭೆ ನಡೆಯಲಿದ್ದು, ಆ ಸಭೆಗೆ ಸಂಬಂಧಿತ ಎಲ್ಲ ಇಲಾಖೆಯವರು ವಾರ್ಷಿಕ ಕರಡು ಅಭಿವೃದ್ಧಿ ಯೋಜನೆ ತಯಾರಿಕೆಗಾಗಿ ಪಟ್ಟಿ ಸಲ್ಲಿಸಬೇಕಾಗುತ್ತದೆ. ವಿವಿಧ ಇಲಾಖೆಗಳ ಅಧಿಕಾರಿಗಳು ತಾಲೂಕಾವಾರು ಜನಸಂಖ್ಯೆಗನುಗುಣವಾಗಿ ಸದ್ಯ ಲಭ್ಯವಿರುವ ಅನುದಾನ ಹೊರತುಪಡಿಸಿ ಹೆಚ್ಚಿನ ಅಭಿವೃದ್ಧಿ ಕಾರ್ಯಕ್ಕಾಗಿ ಬೇಕಾಗುವ ಅನುದಾನದ ವಿವರವನ್ನು ಮತ್ತು ಬೇಡಿಕೆಗಳ ಪಟ್ಟಿಯನ್ನು ಸಲ್ಲಿಸಬೇಕಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 2026-27ನೇ ಸಾಲಿಗೆ ಪಂಚಾಯತ್ ರಾಜ್ ಸಂಸ್ಥೆಗಳ ಕಾರ್ಯಕ್ರಮಗಳಿಗೆ ಕರಡು ವಾರ್ಷಿಕ ಕರಡು ಆಯವ್ಯಯ, 2026-27ನೇ ಸಾಲಿಗೆ ಕೆಳಹಂತದಿಂದ ಜಿಲ್ಲಾ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆ ತಯಾರಿಕೆ, 2025-26ನೇ ಸಾಲಿನ ಅಕ್ಟೋಬರ್ 2025ರ ಮಾಹೆಯ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ಕುರಿತು ಚರ್ಚಿಸಲಾಯಿತು.


ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಸಾವಿನಲ್ಲೂ ಸಾರ್ಥಕತೆ ಮೆರೆದ ನಾರಾಯಣ್ ವನ್ನಾಲ್ | ಗ್ರೀನ್ ಕಾರಿಡಾರ್ ಮೂಲಕ ಕಿಡ್ನಿ ಸಾಗಾಟ

# ನಾಲ್ವರ ಜೀವಕ್ಕೆ ಹೊಸ ಆಯಾಮ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿಯೊಬ್ಬರಿಗೆ ಪಿತ್ತಕೋಶದ ಶಸ್ತ್ರಚಿಕಿತ್ಸೆ ವಿಫಲಗೊಂಡ ಹಿನ್ನೆಲೆಯಲ್ಲಿ ಮೃತಪಟ್ಟಿದ್ದಾನೆ ಎಂದು ವೈದ್ಯರು ಘೋಷಿಸಿದ್ದರು. ಆದರೆ, ಅಚ್ಚರಿ ಎನ್ನುವಂತೆ ಉಸಿರಾಟ ಆರಂಭಿಸಿ, ಒಂದು ವಾರದ ಕಾಲ ಜೀವನ್ಮರಣದ ಹೋರಾಟ ನಡೆಸಿದ ನಾರಾಯಣ ಹೊನ್ನಲ್ ಗುರುವಾರ ತಡರಾತ್ರಿ ಮೃತಪಟ್ಟಿದ್ದಾರೆ. ಆದರೆ ಸಾವಿನಲ್ಲೂ ಸಾರ್ಥಕತೆ ಮೆರೆದ ನಾರಾಯಣ್ ವನ್ನಾಲ ಕುಟುಂಬಸ್ಥರು, ಅಂಗಾಂಗ ದಾನಕ್ಕೆ ಸಮ್ಮತಿ ಸೂಚಿಸಿ ನಾಲ್ವರ ಬಾಳಲ್ಲಿ ಬೆಳಕು ಮೂಡಿಸಿದ್ದಾರೆ. ಎರಡು ಮೂತ್ರಪಿಂಡಗಳು ಹಾಗೂ ಎರಡು ಕಣ್ಣುಗಳು ನಾಲ್ವರ ಜೀವಕ್ಕೆ ಹೊಸ ಆಯಾಮ ನೀಡಿವೆ.



ನಾರಾಯಣ ಅವರು ನ. 6ರಂದು ಧಾರವಾಡದ ಖಾಸಗಿ ಆಸ್ಪತ್ರೆಯಲ್ಲಿ ಪಿತ್ತಕೋಶದ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ನಾರಾಯಣ್ ಅವರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ಘೋಷಿಸಿದ್ದರು.


ಇದರ ಬೆನ್ನಲ್ಲೇ, ಕುಟುಂಬಸ್ಥರು ಮೃತದೇಹವನ್ನು ಗದಗ-ಬೆಟಗೇರಿಗೆ ತಂದು ಅಂತ್ಯಸಂಸ್ಕಾರಕ್ಕೆ ಸಿದ್ಧತೆ ಮಾಡಿಕೊಂಡಿದ್ದರು. ಮೃತರ ಆತ್ಮಕ್ಕೆ ಶಾಂತಿ ಕೋರಿ, ಭಾವಪೂರ್ಣ ಶ್ರದ್ಧಾಂಜಲಿ ಬ್ಯಾನರ್‌ಗಳನ್ನು ಸಹ ಗದಗ-ಬೆಟಗೇರಿಯ ಹಲವೆಡೆ ಹಾಕಲಾಗಿತ್ತು. ಆಸ್ಪತ್ರೆಯಿಂದ ಆಂಬ್ಯುಲೆನ್ಸ್ ಮೂಲಕ ನಾರಾಯಣ್ ಅವರ ದೇಹವನ್ನು ಮನೆಗೆ ತರುತ್ತಿದ್ದಂತೆ ನಾರಾಯಣ್ ಅವರು ಇದ್ದಕ್ಕಿದ್ದಂತೆ ಉಸಿರಾಡಲು ಪ್ರಾರಂಭಿಸಿ ಕಣ್ಣು ತೆರೆದಿದ್ದಾರೆ. ಈ ಅನಿರೀಕ್ಷಿತ ಪವಾಡವನ್ನು ಕಂಡು ಕುಟುಂಬದ ಸದಸ್ಯರು ತೀವ್ರ ಆಶ್ಚರ್ಯ ಹಾಗೂ ಸಂತೋಷ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಅವರನ್ನು ಬೆಟಗೇರಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ನ. 6ರಿಂದ 13ರವರೆಗ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಅವರಿಗೆ ಚಿಕಿತ್ಸೆ ಮುಂದುವರೆಸಲಾಗಿತ್ತು.



ಅಂತಿಮವಾಗಿ ಗುರುವಾರ ನಾರಾಯಣ ಅವರ ಮೆದುಳು ನಿಷ್ಕ್ರಿಯವಾಗಿದೆ ▸▸3ನೇ ಪುಟಕ್ಕೆ

> ಗದಗ ಜಿಲ್ಲಾ ಪೊಲೀಸರು ಗುರುವಾರ ತಡರಾತ್ರಿ 'ಗ್ರೀನ್ ಕಾರಿಡಾರ್' ಮೂಲಕ ಒಂದು ಅಮೂಲ್ಯ ಜೀವವನ್ನು ಉಳಿಸಿದ್ದಾರೆ. ಗದಗ ಜಿಲ್ಲೆಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಿಂದ ಧಾರವಾಡದ ಎಸ್‌ಡಿಎಂ ಆಸ್ಪತ್ರೆಯ ರೋಗಿಯೊಬ್ಬರಿಗೆ ಬೇಕಾಗಿದ್ದ ಮೂತ್ರಪಿಂಡವನ್ನು ಸಾಗಾಟ ಮಾಡಿದ್ದಾರೆ. ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಅವರು ತ್ವರಿತ ಯೋಜನೆಯಿಂದಾಗಿ ಗ್ರೀನ್ ಕಾರಿಡಾರ್ ಸಿದ್ಧವಾಯಿತು.
>
> ಗದಗ-ಧಾರವಾಡದ ನಡುವಿನ ರಸ್ತೆಯುದ್ದಕ್ಕೂ ಪೊಲೀಸರು ನಿಂತು ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗದಂತೆ, ಆಂಬ್ಯುಲೆನ್ಸ್‌ಗೆ ಕ್ಷಿಪ್ರ ಗತಿಯಲ್ಲಿ ಸಾಗಲು ಅನುವು ಮಾಡಿಕೊಟ್ಟರು. ದಾಖಲೆಯ ವೇಗದಲ್ಲಿ ಕಿಡ್ನಿಯನ್ನು ಸಾಗಿಸಲಾಯಿತು.

# ಕಾಲಭೈರವ ಶಿವನ ಪ್ರತಿರೂಪ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕಾಲಭೈರವನ ಆರಾಧನೆಯಿಂದ ನಕಾರಾತ್ಮಕ ಶಕ್ತಿ ನಾಶವಾಗುತ್ತದೆ ಎಂದು ಬಸವರಾಜ ಗೌರಿಮನಿ ಹೇಳಿದರು.

ಅವರು ಪಟ್ಟಣದ ಕಾಲ ಭೈರವ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ನಿಮಿತ್ತ ಕಾಲಭೈರವನಿಗೆ ಕಾರ್ತಿಕೋತ್ಸವ ಜರುಗಿಸಿ ಮಾತನಾಡಿ, ಕಾಲಭೈರವ ಸಾಕ್ಷಾತ್ ಶಿವನ ಪ್ರತಿರೂಪವಾಗಿರುವುದರಿಂದ ದುಷ್ಟ ಶಕ್ತಿ ನಿರ್ಮೂಲನೆ ಮಾಡಲು ಅವತಾರ ಎತ್ತಿ ಬಂದವನು. ಕಾಲಭೈರವನ ಆರಾಧನೆಯಿಂದ ನಕಾರಾತ್ಮಕ ಶಕ್ತಿ ಅಡಗಿ ಸಕಾರಾತ್ಮಕ ಶಕ್ತಿ ಹೆಚ್ಚಿಸುತ್ತದೆ ಎಂದರು.

ಬಸವರಾಜ ಗೌರಿಮನಿ, ಶಶಿಕಲಾ ಗೌರಿಮನಿ, ಚಿದಾನಂದ ಗೌರಿಮನಿ, ವನಜಾಕ್ಷಿ ಕೋರ್ಪಡೆ, ಕಸ್ತೂರಿ ಬಗಾಡೆ, ಸಚಿನ ಗೌರಿಮನಿ, ದರ್ಶನ ಗೌರಿಮನಿ, ಸಂಕೇತ ಹಾಸಲ್ಕರ್, ರೇಣುಕಾ ಗೌರಿಮನಿ ಇದ್ದರು.

# ಆಕ್ಷೇಪಣೆ ಸಲ್ಲಿಸಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ Rop –2025–26 ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ ಅನುಮೋದನೆಗೊಂಡ 2 ಎಮ್‌ಬಿಬಿಎಸ್ ವೈದ್ಯಾಧಿಕಾರಿಗಳು, 2 ಶುಶ್ರೂಷ ಅಧಿಕಾರಿಗಳ ಮತ್ತು 2 ಪ್ರಯೋಗಶಾಲಾ ತಂತ್ರಜ್ಞರುಗಳ ಹುದ್ದೆಗಳು ಖಾಲಿಯಿದ್ದು, ಸದರಿ ಹುದ್ದೆಗಳನ್ನು ರೋಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗಳಿಗೆ ಅಪ್‌ಲೋಡ್ ಆಗಿರುವ ಅರ್ಜಿಗಳಲ್ಲಿ ರೋಷ್ಟರ್ ಕಂ ಮೆರಿಟ್ ಅಳವಡಿಸಿ ತಯಾರಿಸಿದ ಅಭ್ಯರ್ಥಿಗಳಿಗೆ ಮೂಲ ದಾಖಲಾತಿಗಳ ಪರಿಶೀಲನಗೆ ಒಳಪಡಿಸಿ ಅರ್ಹಹೊಂದಿದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದ್ದು, ಸದರಿ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಾಗಿ 13.11.2025ರಿಂದ 18.11.2025ರ ಸಂಜೆ 4 ಗಂಟೆಯವರೆಗೆ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ, ಜಿಲ್ಲಾಡಳಿತ ಭವನ, ರೂಮ್ ನಂ. 101 ಹುಬ್ಬಳ್ಳಿ ರೋಡ್, ಗದಗ ಇಲ್ಲಿಗೆ ಆಕ್ಷೇಪಣೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ತದನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಸುದ್ದಿಗೋಷ್ಠಿಯಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ ಭವಿಷ್ಯ

# ಬಿಹಾರದ ಸ್ಥಿತಿ ಕರ್ನಾಟಕಕ್ಕೂ ಬರಲಿದೆ




■ವಿಜಯಸಾಕ್ಷಿ ಸುದ್ದಿ, ಗದಗ

ಬಿಹಾರ ಜನತೆ ನರೇಂದ್ರ ಮೋದಿ, ಅಮಿತ್ ಶಾ, ನಿತೀಶ್ ಕುಮಾರ ನಾಯಕತ್ವ ಮೆಚ್ಚಿ ಆಶೀರ್ವಾದ ಮಾಡಿದ್ದಾರೆ. ರಾಷ್ಟ್ರೀಯ ಕಾಂಗ್ರೆಸ್ 4 ಸ್ಥಾನಕ್ಕೆ ಇಳಿದಿದ್ದು ದುರಂತದ ಸಂಗತಿಯಾಗಿದೆ. ಎನ್.ಡಿ.ಎ ಮೈತ್ರಿಕೂಟಕ್ಕೆ ಅಧಿಕಾರ ತಂದುಕೊಟ್ಟ ಬಿಹಾರ ಜನತೆಗೆ ಧನ್ಯವಾದಗಳು ಎಂದು ನರಗುಂದ ಮತಕ್ಷೇತ್ರದ ಶಾಸಕ ಸಿ.ಸಿ. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದೇಶದಲ್ಲೆಡೆ ಕಾಂಗ್ರೆಸ್ ಹಠಾವೋ ಅಭಿಯಾನ ಪ್ರಾರಂಭವಾಗಿದೆ. ಮುಂದೆ ಈ ವಾಕ್ಯ ಕರ್ನಾಟಕಕ್ಕೂ ಬರಲಿದೆ. ರಾಜ್ಯದಲ್ಲಿನ ಒಂದೇ ಒಂದು ರಸ್ತೆ ಗುಂಡಿ ಮುಚ್ಚಲು ಸಾಧ್ಯವಾಗದ ಸ್ಥಿತಿಯಲ್ಲಿ ರಾಜ್ಯ ಸರ್ಕಾರವಿದೆ. ಪಂಚಗ್ಯಾರಂಟಿ ಪೈಕಿ ಶಕ್ತಿಯೋಜನೆ ಹೊರತುಪಡಿಸಿ ಯಾವುದೇ ಯೋಜನೆ ಸಮರ್ಪಕವಾಗಿ ಜನತೆಗೆ ತಲುಪಿಲ್ಲ. ಅಭಿವೃದ್ಧಿ ಹೊರತುಪಡಿಸಿ ಅಧಿಕಾರಕ್ಕಾಗಿ ಕುಸ್ತಿ ನಡೆಯುತ್ತಿದೆ. ಸಚಿವರು ತಮ್ಮ ಜವಾಬ್ದಾರಿ ನಿಭಾಯಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೆಳೆ ಪರಿಹಾರವನ್ನು ರಾಜ್ಯ ಸರ್ಕಾರ ಇದೂವರೆಗೂ ಬಿಡುಗಡೆ ಮಾಡುತ್ತಿಲ್ಲ. ಕೇಂದ್ರ ನೀಡಿದ ಅನುದಾನ ಮಾತ್ರ ರೈತರಿಗೆ ತಲುಪುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹಾಳಾಗಿದೆ. ರಾಜ್ಯದಲ್ಲಿ 50 ಕಬ್ಬು ತುಂಬಿದ ಲಾರಿಗಳಿಗೆ ಬೆಂಕಿ ಹಚ್ಚಲಾಗಿದೆ. ಗೃಹ ಸಚಿವರು ಮಾಹಿತಿ ಇಲ್ಲ ಎಂದು ಹೇಳುತ್ತಾರೆ. ಕೈಲಾಗದ ಸರ್ಕಾರ ನಡೆಸುವುದಕ್ಕಿಂತ ರಾಜೀನಾಮೆ ನೀಡಿ ಮತ್ತೊಮ್ಮೆ ಚುನಾವಣೆ ಎದುರಿಸುವುದು ಸೂಕ್ತ ಎಂದು ಹೇಳಿದರು.

ಹಿಂದೂತ್ವದ ಪರವಾಗಿ ಧ್ವನಿ ಎತ್ತುವ ಮತ್ತು ಸಂಸ್ಕೃತಿ, ಸಂಸ್ಕಾರದ ಬಗ್ಗೆ ಭಕ್ತರಿಗೆ ಆಶೀರ್ವಚನ ನೀಡುತ್ತಿರುವ ಕನ್ಹೇರಿ ಮಠದ ಕಾಡಸಿದ್ದೇಶ್ವರ ಶ್ರೀಗಳ ವಿರುದ್ಧ ಹೇರಿರುವ ನಿರ್ಬಂಧದ ವಿರುದ್ಧ ನವೆಂಬರ್ 15ರಂದು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು ಎಂದು ಶಾಸಕ ಸಿ.ಸಿ. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಪ್ರಮುಖರಾದ ಅನಿಲ್ ಮುಳಗುಂದ, ಎಂ.ಎಂ ಹಿರೇಮಠ ಸೇರಿದಂತೆ ಪಕ್ಷದ ಕಾರ್ಯಕರ್ತರಿದ್ದರು.

> 114 ವರ್ಷ ಬಾಳಿ–ಬದುಕಿ ಸಾಲು ಮರಗಳನ್ನು ನೆಟ್ಟ ಸಾಲುಮರದ ತಿಮ್ಮಕ್ಕನವರ ಅಗಲಿಕೆಯಿಂದ ನೋವು ಉಂಟಾಗಿದೆ.
>
> ಇದೂವರೆಗೂ 8 ಸಾವಿರಕ್ಕೂ ಹೆಚ್ಚು ಗಿಡಗಳನ್ನು ನೆಟ್ಟು ಅವರು ಪೋಷಿಸಿದ್ದಾರೆ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ.
>
> – ಸಿ.ಸಿ. ಪಾಟೀಲ.
> ಶಾಸಕರು, ನರಗುಂದ ಮತಕ್ಷೇತ್ರ.

# ದೆಹಲಿ ಕಾರ್ ಸ್ಫೋಟ: ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾದಲ್ಲಿ ಆರೋಪಿ ಡಾ. ಉಮರ್ ನಬಿ ಮನೆ ಧ್ವಂಸ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ರೆಡ್ ಫೋರ್ಟ್ ಸ್ಫೋಟ ಪ್ರಕರಣದಲ್ಲಿ ಶಂಕಿತ ಆರೋಪಿಯಾಗಿರುವ ಡಾ. ಉಮರ್ ನಬಿ ಅವರ ಮನೆಯನ್ನು ಧ್ವಂಸ ಮಾಡಲಾಗಿದೆ.

ಸೋಮವಾರ ದೆಹಲಿಯಲ್ಲಿ ಸ್ಫೋಟಗೊಂಡ ಕಾರು ಚಲಾಯಿಸಿದ್ದ ಆರೋಪಿ ಡಾ. ಉಮರ್ ನಬಿ ಅವರ ಮನೆಯನ್ನು ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಭದ್ರತಾ ಪಡೆಗಳು ನೆಲಸಮಗೊಳಿಸಿವೆ.

ಸ್ಫೋಟಕಗಳಿಂದ ತುಂಬಿದ್ದ ಹುಂಡೈ ಐ20 ಕಾರಿನ ಚಕ್ರಗಳ ಹಿಂದೆ ಉಮರ್ ಇದ್ದರು. ಸ್ಫೋಟ ಸ್ಥಳದಿಂದ ಸಂಗ್ರಹಿಸಲಾದ ಡಿಎನ್‌ಎ ಮಾದರಿಗಳು ಡಾ. ಉಮರ್ ಅವರ ತಾಯಿಯ ಡಿಎನ್‌ಎ ಮಾದರಿಗಳೊಂದಿಗೆ ಹೊಂದಿಕೆಯಾದ ನಂತರ ಅವರ ಗುರುತು ದೃಢಪಟ್ಟಿದೆ ಎಂದು ಹೇಳಲಾಗುತ್ತಿದೆ. ಗುರುವಾರ ಮತ್ತು ಶುಕ್ರವಾರದ ಮಧ್ಯರಾತ್ರಿಯಲ್ಲಿ ಜಮ್ಮು–ಕಾಶ್ಮೀರ ಭದ್ರತಾ ಪಡೆಗಳು ಉಮರ್ ನಬಿ ಮನೆಯನ್ನು ಕೆಡುವಲಾಗಿದೆ ಎಂದು ಹೇಳಿದ್ದಾರೆ.

ಸೋಮವಾರ ರಾತ್ರಿ ಕೆಂಪು ಕೋಟೆ ಬಳಿ ಸಂಭವಿಸಿದ ಕಾರು ಸ್ಫೋಟದಲ್ಲಿ 13 ಮಂದಿ ಸಾವನ್ನಪ್ಪಿ, ಹಲವರು ಗಾಯಗೊಂಡಿದ್ದರು.

ಶೈಕ್ಷಣಿಕವಾಗಿ ಸಾಧನೆ ಮಾಡಿದ ವೃತ್ತಿಪರ ಎಂದು ತಮ್ಮ ವಲಯದಲ್ಲಿ ಹೆಸರುವಾಸಿಯಾಗಿದ್ದ ಉಮರ್, ಕಳೆದ ಎರಡು ವರ್ಷಗಳಿಂದ ತೀವ್ರಗಾಮಿಯಾಗಿ ಬದಲಾಗಿದ್ದಾರೆ ಎನ್ನಲಾಗಿದೆ. ಅವರು ಸಾಮಾಜಿಕ ಮಾಧ್ಯಮದಲ್ಲಿ ಹಲವಾರು ತೀವ್ರಗಾಮಿ ಸಂದೇಶ ಕಳುಹಿಸುವ ಗುಂಪುಗಳನ್ನು ಸೇರಿದ್ದಾರೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

# ಬಾಗಲಕೋಟೆಯಲ್ಲಿ ಕಬ್ಬಿನ ಟ್ರಾಕ್ಟರುಗಳಿಗೆ ಬೆಂಕಿ ಹಚ್ಚಿದ ಘಟನೆಗೆ ರೈತಪರ ಸಂಘಟನೆಗಳ ಖಂಡನೆ

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ

'ವಿನಾಶಕಾರಿ ಕೃತ್ಯಗಳನ್ನು ರೈತಚಳವಳಿ ಎಂದೂ ಪಾಲಿಸಿಲ್ಲ' ಬಾಗಲಕೋಟೆಯ ಸೈದಾಪುರದಲ್ಲಿ ಹಲವಾರು ಕಬ್ಬು ತುಂಬಿದ ಟ್ರಾಕ್ಟರುಗಳು ಸುಟ್ಟು ಭಸ್ಮವಾಗಿರುವುದು ವಿಷಾದನೀಯ. ಇದಕ್ಕೆ ಯಾರೇ ಪ್ರೇರಣೆ ನೀಡಿದ್ದರೂ ಈ ಕೃತ್ಯವನ್ನು ನಾವು ಖಂಡಿಸುತ್ತೇವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಅಧ್ಯಕ್ಷರಾದ ಹೆಚ್.ಆರ್. ಬಸವರಾಜಪ್ಪ, ಕರ್ನಾಟಕ ರಾಜ್ಯ ರೈತಸಂಘದ ಅಧ್ಯಕ್ಷರಾದ ಬಡಗಲಪುರ ನಾಗೇಂದ್ರ, ಚುಕ್ಕಿನಂಜುಂಡಸ್ವಾಮಿ, ನೂರ್ ಶ್ರೀಧರ್, ಡಿ.ಹೆಚ್, ಪೂಜಾರ್ ಸೇರಿದಂತೆ ಹಲವು ರೈತ ನಾಯಕರು, ರೈತಪರ ಹೋರಾಟಗಾರರು ಹೇಳಿದ್ದಾರೆ.

ಕಬ್ಬಿನ ಟ್ರಾಕ್ಟರುಗಳಿಗೆ ಬೆಂಕಿ ಹೊತ್ತಿರುವ ದುರ್ಘಟನೆ ಕುರಿತು ರೈತ ಹಾಗೂ ರೈತಪರ ಸಂಘಟನೆಗಳು ತುರ್ತು ಹೇಳಿಕೆ ಬಿಡುಗಡೆ ಮಾಡಿದ್ದು, ಕರ್ನಾಟಕದ ರೈತ ಚಳವಳಿ ಇತಿಹಾಸದುದ್ದಕ್ಕೂ ಶಾಂತಿಯುತವಾಗಿ ನಡೆದು ಬಂದಿದೆ. ರೈತರದು ಸದಾ ಜೀವಪರ ನಿಲುವು, ವಿನಾಶಕಾರಿ ಕೃತ್ಯಗಳನ್ನು ರೈತ ಚಳವಳಿ ಎಂದೂ ಪಾಲಿಸಿಲ್ಲ, ಸಮ್ಮತಿಸಿಲ್ಲ.

ಆದರೆ ಈ ಘಟನೆಗೆ ಇತ್ತೀಚಿಗೆ ನಡೆದ ರೈತ ಚಳವಳಿ ಸರಿಯಾದ ರೀತಿಯಲ್ಲಿ ಸಮಾರೋಪಗೊಳ್ಳದೇ ಹೋದದ್ದು ಮುಖ್ಯ ಕಾರಣವಾಗಿದೆ.

# ಮಕ್ಕಳನ್ನು ಓದಿನತ್ತ ಸೆಳೆಯಬೇಕಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳೇ ಈ ದೇಶದ ಸಂಪತ್ತು. ಅವರಿಗೆ ಉತ್ತಮ ಸಂಸ್ಕಾರ ಮತ್ತು ಶಿಕ್ಷಣವನ್ನು ಕೊಟ್ಟು ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ. ಇಂದಿನ ಮಕ್ಕಳು ಓದಿನ ಕಡೆ ಗಮನ ಕೊಡುತ್ತಿಲ್ಲ. ಹೆಚ್ಚು ಓದಿದಷ್ಟ ಮಕ್ಕಳಲ್ಲಿ ಜ್ಞಾನ ಬೆಳೆಯುತ್ತದೆ. ಈ ನಿಟ್ಟಿನಲ್ಲಿ ಮಕ್ಕಳನ್ನು ಓದಿನತ್ತ ಸೆಳೆಯುವ ಕೆಲಸ ನಡೆಬೇಕಾಗಿದೆ ಎಂದು ನಿವೃತ್ತ ಶಿಕ್ಷಕ ಹಾಗೂ ಮಕ್ಕಳ ಸಾಹಿತಿ ಪೂರ್ಣಾಜಿ ಖರಾಟೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶುಕ್ರವಾರ ಜರುಗಿದ ಮಕ್ಕಳ ದಿನಾಚರಣೆ ಮತ್ತು ಪಾಲಕ, ಪೋಷಕ ಶಿಕ್ಷಕರ ಮಹಾಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿ ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ, ಇಂದು ಮಕ್ಕಳ ಸಾಹಿತ್ಯ ರಚನೆ ಕಡಿಮೆ ಆಗುತ್ತಿದೆ. ಮಕ್ಕಳಲ್ಲಿ ಓದು ಕಡಿಮೆ ಆಗಿರುವುದೇ ಇದಕ್ಕೆ ಮುಖ್ಯ ಕಾರಣ. ಆಧುನಿಕ ತಂತ್ರಜ್ಞಾನ ಬಂದಂತೆ ಮಕ್ಕಳು ಪುಸ್ತಕಗಳಿಂದ ದೂರ ಸರಿಯುತ್ತಿದ್ದಾರೆ. ಕೊರೋನಾ ಸಮಯದಲ್ಲಿ ಅಂಟಿಸಿಕೊಂಡ ಮೊಬೈಲ್ ಬಳಕೆ ಅವರಿಗೆ ಇಂದು ಚಟವಾಗಿ ಪರಿಣಮಿಸಿದ್ದು ವಿಷಾದನೀಯ ಎಂದರು.

ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ, ಪರಮೇಶ ಲಮಾಣಿ, ಸೋಮಣ್ಣ ಯತ್ತಿನಹಳ್ಳಿ, ಶಿವಲಿಂಗಯ್ಯ ಹೊತ್ತಿಗಿಮಠ, ಎಸ್‌ಡಿಎಂಸಿ ಉಪಾಧ್ಯಕ್ಷೆ ನಿಖಿತಾ ಶೇರಖಾನೆ ಮಾತನಾಡಿದರು. ಎಸ್‌ಡಿಎಂಸಿ ಅಧ್ಯಕ್ಷ ಮಲ್ಲೇಶಪ್ಪ ಬಸಾಪುರ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಶಿಕ್ಷಕ ಎಸ್.ಬಿ. ಲಕ್ಷ್ಮೇಶ್ವರ ಮಕ್ಕಳ ಹಾಡುಗಳನ್ನು ಹಾಡಿದರು. ಎನ್.ಆರ್. ಸಾತಪುತೆ, ಗೊರವರ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಅಶೋಕ ಸೊರಟೂರ, ಸಿಆರ್‌ಪಿ ಶ್ರೀನಿವಾಸ ಮತ್ತೂರ, ಆರ್.ಕೆ. ಉಪನಾಳ, ನೇತ್ರಾವತಿ ಕುಂಬಾರ, ಬೀರಪ್ಪ ಪೂಜಾರ ವೇದಿಕೆಯಲ್ಲಿದ್ದರು. ಎಲ್.ಎ. ಬಣಕಾರ ಸ್ವಾಗತಿಸಿದರು. ಎಚ್.ಡಿ. ನಿಂಗರಡ್ಡಿ ನಿರೂಪಿಸಿದರು. ಆರ್.ಎಂ. ಶಿರಹಟ್ಟಿ ವಂದಿಸಿದರು. ಎಸ್‌ಡಿಎಂಸಿ ಸದಸ್ಯರು, ಮಕ್ಕಳ ಪಾಲಕರು ಇದ್ದರು.

# ಶಿಗ್ಲಿಯಲ್ಲಿ ನುಡಿನಮನ ಕಾರ್ಯಕ್ರಮ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿಯ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯಲ್ಲಿ 1992–93ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಅಭ್ಯಾಸ ಮಾಡಿದ ಸ್ನೇಹಕುಂಜ ಗೆಳೆಯರ ಬಳಗದ ವತಿಯಿಂದ ನ.16ರದು ಈಚೆಗೆ ನಿಧನರಾದ ಶಾಲೆಯ ನಿವೃತ್ತ ಶಿಕ್ಷಕ ವಿ.ಬಿ. ಸಾಲಿ ಹಾಗೂ ಎಚ್.ಸಿ. ರಟಗೇರಿ ಗುರುಗಳಿಗೆ ನುಡಿನಮನ ಕಾರ್ಯಕ್ರಮ ಗ್ರಾಮದ ಹಳೇ ಬಸ್ ನಿಲ್ದಾಣದ ಬಯಲಿನಲ್ಲಿ ಸಂಜೆ 5ಕ್ಕೆ ಜರುಗಲಿದೆ.

ಈ ಕುರಿತು ಶುಕ್ರವಾರ ಮಾಹಿತಿ ನೀಡಿದ ಬಳಗದ ಅಧ್ಯಕ್ಷ ಪ್ರಕಾಶ ಬೆಟಗೇರಿ ಹಾಗೂ ಹಿರಿಯ ಸದಸ್ಯ ರಾಜು ಮುಳಗುಂದಮಠ, ಕಾರ್ಯಕ್ರಮದ ಸಾನ್ನಿಧ್ಯವನ್ನು ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನ ಮಠದ ಶ್ರೀ ದಿಂಗಾಲೇಶ್ವರ ಸ್ವಾಮೀಜಿ ವಹಿಸಿಕೊಳ್ಳುವರು. ನಾಡೋಜ ಡಾ. ಮನು ಬಳಿಗಾರ, ಜಾನಪದ ಸಾಹಿತಿ ಡಾ. ಶಂಭು ಬಳಿಗಾರ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ನೀಲಗಿರಿ ತಳವಾರ, ವಕೀಲ ಎಸ್.ಪಿ. ಬಳಿಗಾರ, ನಿವೃತ್ತ ಪೊಲೀಸ್ ಅಧಿಕಾರಿ ಶಂಕರ ರಾಗಿ, ಎಸ್.ಕೆ. ಮಾದನಳ್ಳಿ, ಶಿವಾನಂದ ರಟಗೇರಿ, ದೇವರಾಜ ಸಾಲಿ ಆಗಮಿಸುವರು. ಕಾರಣ ಬಳಗದ ಎಲ್ಲ ಸದಸ್ಯರು ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಂಜುನಾಥ ನಾವಿ, ವೀರೇಶ ನೂಲ್ವಿ, ಪ್ರಕಾಶ ಹಡಪದ, ಮಹಾಂತೇಶ ಸುಣಗಾರ, ಪ್ರಕಾಶ ಹಡಪದ, ಬಸವರಾಜ ನೂಲ್ವಿ, ಉಮೇಶ ಪೂಜಾರ ಮತ್ತಿತರರು ಇದ್ದರು.

# ಆಳಂದ ಮತ ಕಳ್ಳತನ ಪ್ರಕರಣ: ಪಶ್ಚಿಮ ಬಂಗಾಳದಲ್ಲಿ ಓರ್ವನ ಬಂಧಿಸಿದ ಸಿಐಡಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಳಂದ ಮತ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿರುವ ಸಿಐಡಿ ಪಶ್ಚಿಮ ಬಂಗಾಳದ ನಾಡಿಯಾ ಜಿಲ್ಲೆಯಲ್ಲಿ ವ್ಯಕ್ತಿ ಒಬ್ಬನನ್ನು ಬಂಧಿಸಿದೆ, ಎಂದು ಮೂಲಗಳು ತಿಳಿಸಿವೆ.

2023ರ ವಿಧಾನಸಭಾ ಚುನಾವಣೆಯಲ್ಲಿ ಆಳಂದ ಕ್ಷೇತ್ರದಲ್ಲಿ ನಡೆದಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ 27 ವರ್ಷದ ವ್ಯಕ್ತಿಯನ್ನು ಬುಧವಾರ ಬಂಧಿಸಿ, ಬೆಂಗಳೂರಿಗೆ ಕರೆತರಲಾಗಿದ್ದು, ವಿಚಾರಣೆಗಾಗಿ ಸಿಐಡಿ ಅವರನ್ನು ವಶಕ್ಕೆ ಪಡೆದಿದೆ ಎನ್ನಲಾಗುತ್ತಿದೆ.

ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಹಲವು ಮತಗಳನ್ನು ಅಳಿಸಲು ಆರೋಪಿ ಅರ್ಜಿ ಸಲ್ಲಿಸಿದ್ದರು ಎಂದು ಮೂಲಗಳು ತಿಳಿಸಿವೆ.

ಸಿಐಡಿ ಮೂಲಗಳ ಪ್ರಕಾರ, ನಾಡಿಯಾದ ಬಾಪಿ ಅದ್ಯ ಎಂಬ ಆರೋಪಿಯನ್ನು ಅವರ ಬ್ಯಾಂಕ್ ಖಾತೆಗೆ ವರ್ಗಾವಣೆಯಾದ ಹಣದ ಜಾಡು ಹಿಡಿದು ಬಂಧಿಸಲಾಗಿದೆ.

ಬಿ.ಆರ್ ಪಾಟೀಲ್ ಮತ್ತು ಸಚಿವ ಮತ್ತು ಚಿತ್ತಾಪುರ ಶಾಸಕ ಪ್ರಿಯಾಂಕ್ ಖರ್ಗೆ ಅವರು ಮತ ಅಳಿಸುವಿಕೆ ಪ್ರಯತ್ನಗಳ ಬಗ್ಗೆ ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿಗಳ (ಅಇಔ) ಗಮನಕ್ಕೆ ತಂದಿದ್ದರು. ಆದರೆ, ಮುಖ್ಯ ಚುನಾವಣಾ ಅಧಿಕಾರಿ, ಯಾವುದೇ ಮುಂದಿನ ಕ್ರಮಗಳನ್ನು ನಿಲ್ಲಿಸಲು ಮತ್ತು ಮತದಾರರ ಪಟ್ಟಿಯ ಸದ್ಯದ ಸ್ಥಿತಿಯನ್ನು ಕಾಯ್ದುಕೊಳ್ಳಲು ನಿರ್ಧರಿಸಿದರು.

ಪಾಟೀಲ್ ಅವರ ಪ್ರಕಾರ, ದಲಿತರು ಮತ್ತು ಅಲ್ಪಸಂಖ್ಯಾತರನ್ನು ಒಳಗೊಂಡ 6,994 'ಕಾಂಗ್ರೆಸ್ ಮತಗಳನ್ನು' ಅಳಿಸಲು ಅರ್ಜಿಗಳನ್ನು ಸಲ್ಲಿಸಲಾಗಿತ್ತು. ಸಿಇಒ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶಿಸಿದ ನಂತರ ಮತ ಅಳಿಸುವಿಕೆಯನ್ನು ನಿಲ್ಲಿಸಲಾಯಿತು. ಈ ಮತಗಳನ್ನು ಅಳಿಸಿದ್ದರೆ ನಾನು ಖಂಡಿತವಾಗಿಯೂ ಚುನಾವಣೆಯಲ್ಲಿ ಸೋಲುತ್ತಿದ್ದೆ ಎಂದಿದ್ದಾರೆ.

ಅವರು 2023ರ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಹತ್ತಿರದ ಪ್ರತಿಸ್ಪರ್ಧಿ ಸುಭಾಷ್ ಗುತ್ತೇದಾರ್ (ಬಿಜೆಪಿ) ವಿರುದ್ಧ ಸುಮಾರು 10,000 ಮತಗಳ ಅಂತರದಿಂದ ಗೆದ್ದಿದ್ದರು.

ಇತ್ತೀಚೆಗೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ 'ವೋಟ್ ಚೋರಿ' ಹೇಗೆ ನಡೆಯುತ್ತಿದೆ ಎಂಬುದನ್ನು ವಿವರಿಸಿದರು ಮತ್ತು ಆಳಂದ ಕ್ಷೇತ್ರದ ಉದಾಹರಣೆ ನೀಡಿದ್ದರು.

# ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಗಡಿ ಸನ್‌ರೈಸ್ ಆಸ್ಪತ್ರೆಯಲ್ಲಿ ನ.14ರಂದು ಮಕ್ಕಳ ದಿನಾಚರಣೆ ಅಂಗವಾಗಿ ಗರ್ಭಿಣಿ ಸ್ತ್ರೀಯರಿಗೆ ಸೀಮಂತ ಕಾರ್ಯಕ್ರಮದ ಸಂಪ್ರದಾಯ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಅಗಡಿ ಸಂಸ್ಥೆಯ ಅಧ್ಯಕ್ಷ ಹರ್ಷವರ್ಧನ ವೆಂಕಪ್ಪ ಅಗಡಿ ಮಾತನಾಡಿ, ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು ಎಂಬಂತೆ ಮಹಿಳೆಯರಲ್ಲಿ ಅಪಾರವಾದ ಶಕ್ತಿ ಅಡಗಿರುತ್ತದೆ. ಜಗದ ಸೃಷ್ಟಿಯೇ ಹೆಣ್ಣಾಗಿದ್ದು, ತಾಯಿ, ಪತ್ನಿ, ಸ್ನೇಹಿತೆ, ಮಗಳು ಎಲ್ಲವನ್ನೂ ನಿಭಾಯಿಸುತ್ತಾಳೆ. ತಾಯಂದಿರ ಆರೋಗ್ಯ ಅತ್ಯಂತ ಮುಖ್ಯವಾಗಿದ್ದು, ತಾಯಿ ಆರೋಗ್ಯದಿಂದಿದ್ದರೆ ಮಗು ಆರೋಗ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಗರ್ಭಿಣಿಯರು ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಬೇಕು. ತಂದೆಯವರಾದ ದಿ. ವೆಂಕಪ್ಪನವರು ಪಟ್ಟಣದಲ್ಲಿ ಶಿಕ್ಷಣ ಸೇವೆಯ ಜತೆಗೆ ಆಸ್ಪತ್ರೆ, ದೇವಸ್ಥಾನ ನಿರ್ಮಿಸುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಈ ಭಾಗದ ಜನರ ಸಹಕಾರ ಸ್ಮರಣೀಯ ಎಂದರು.

ಅಗಡಿ ಸಂಸ್ಥೆಯ ಉಪಾಧ್ಯಕ್ಷರಾದ ಗೀತಾ ಹರ್ಷವರ್ಧನ ಅಗಡಿ ಆಸ್ಪತ್ರೆಯಲ್ಲಿ ಗರ್ಭಿಣಿ ಸ್ತ್ರೀಯರಿಗೆ ಉಡಿ ತುಂಬಿ ಶುಭ ಹಾರೈಸಿದರು. ಆಸ್ಪತ್ರೆಯ ಮುಖ್ಯ ಆಡಳಿತ ಅಧಿಕಾರಿ ಡಾ. ರಾಜಶೇಖರ ಮೂಲಿಮನಿ, ವೈದ್ಯಕೀಯ ಅಧಿಕಾರಿ ಡಾ. ಸುಜಾತಾ ಸಂಗೂರ, ಗರ್ಭಿಣಿ ಮತ್ತು ಸ್ತ್ರೀರೋಗ ತಜ್ಞರಾದ ಡಾ. ರೇಷ್ಮಾ ರಾಠೋಡ, ಚಿಕ್ಕ ಮಕ್ಕಳ ತಜ್ಞ ಡಾ. ಶಶಿಕಿರಣ ಹೊಸಮನಿ, ಶಸ್ತ್ರ ಚಿಕಿತ್ಸಾ ತಜ್ಞ ಡಾ. ಕೃಷ್ಣಾರೆಡ್ಡಿ ನಾವಳ್ಳಿ, ಚರ್ಮರೋಗ ತಜ್ಞ ಡಾ. ಎಂ.ಎಸ್. ಪಾಟೀಲ, ಯೋಗ ಮತ್ತು ಪ್ರಕೃತಿ ಚಿಕಿತ್ಸೆಯ ಡಾ. ಶ್ರುತಿ ಹೂವಿನ ಹಾಗೂ ಆಸ್ಪತ್ರೆಯ ಎಲ್ಲ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನಾಲ್ವರ ಜೀವಕ್ಕೆ ಹೊಸ ಆಯಾಮ

▶▶ ಮೊದಲನೇ ಪುಟದಿಂದ

ಎಂದು ವೈದ್ಯರು ಘೋಷಿಸಿದರು. ಆಗ ಹುಲಕೋಟಿಯ ಕೆ.ಎಚ್. ಪಾಟೀಲ ಸಂಶೋಧನಾ ಕೇಂದ್ರ ಮತ್ತು ಆಸ್ಪತ್ರೆಯ ಆಡಳಿತ ಮಂಡಳಿ ಸದಸ್ಯರು ಕುಟುಂಬದ ಮನವೊಲಿಸಿ ಅಂಗಾಂಗ ದಾನಕ್ಕೆ ಸಮ್ಮತಿ ಪಡೆದರು. ನಾರಾಯಣ್ ಕುಟುಂಬದ ಸದಸ್ಯರ ಒಪ್ಪಿಗೆಯ ಮೇರೆಗೆ ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ಎರಡು ಮೂತ್ರಪಿಂಡ ಹಾಗೂ ಎರಡು ಕಣ್ಣುಗಳನ್ನು ತೆಗೆದುಕೊಳ್ಳಲಾಯಿತು.

ಎರಡು ಮೂತ್ರಪಿಂಡಗಳ ಪೈಕಿ ಒಂದನ್ನು ಕೆ.ಎಚ್. ಪಾಟೀಲ ಆಸ್ಪತ್ರೆಯ ರೋಗಿಯೊಬ್ಬರಿಗೆ ಕಸಿ ಹಾಗೂ ಇನ್ನೊಂದನ್ನು ಧಾರವಾಡದ ಎಸ್‌ಡಿಎಂ ಆಸ್ಪತ್ರೆಯ ರೋಗಿಯೊಬ್ಬರಿಗೆ ಕಸಿ ಮಾಡಲಾಯಿತು.

ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಎರಡು ಕಣ್ಣುಗಳನ್ನು ಪಡೆದುಕೊಂಡಿತು. ಶುಕ್ರವಾರ ಸಂಜೆ ನಾರಾಯಣ್ ವನ್ನಾಲ್ ಅವರ ಅಂತ್ಯಕ್ರಿಯೆ ಬೆಟಗೇರಿ ಮುಕ್ತಿಧಾಮದಲ್ಲಿ ನೆರವೇರಿತು.

ಬೆಟಗೇರಿಯ ಕುರುಹಿನಶೆಟ್ಟಿ ಸಮಾಜದ ನೀಲಕಂಠೇಶ್ವರ ಮಠದ ನೀಲಕಂಠ ಪಟ್ಟದಾರ್ಯ ಸ್ವಾಮೀಜಿ, ವನ್ನಾಲ್ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಅಂಗಾಂಗ ದಾನ ಯಶಸ್ವಿಗೊಳಿಸಿದ ಆರ್‌ಎಂಎಸ್ ಚೇರಮನ್ ಡಾ. ಎಸ್.ಆರ್. ನಾಗನೂರ, ಡಾ. ಅವಿನಾಶ ಓದುಗೌಡರ, ಡಾ. ಭುವನೇಶ ಆರಾಧ್ಯ, ಡಾ. ಪವನ ಕೋಳಿವಾಡ, ಡಾ. ದೀಪಕ ಕುರಹಟ್ಟಿ, ಡಾ. ನಿಯಾಜ್, ಡಾ. ವಿನಾಯಕ, ಡಾ. ಹರೀಶ ನಾಡಗೌಡರ, ಡಾ. ವಿಶಾಲ ಕಪ್ಪತ್ತನವರ, ಡಾ. ವಂದನಾ ಕಾಂಬಳೆ, ಡಾ. ಪ್ರಭು ಮಡಿವಾಳರ, ಡಾ. ಪ್ಯಾರಾಲಿ ನೂರಾನಿ, ಎಂ.ಆರ್. ಪಾಟೀಲ, ಸಚಿನ ಪಾಟೀಲ, ಆರ್.ಆರ್. ಓದುಗೌಡರ, ಸಿಬ್ಬಂದಿಗಳಾದ ರಾಬರ್ಟ್ ಹಳ್ಳಿ ಸೇರಿದಂತೆ ಅನೇಕ ಗಣ್ಯರು ವನ್ನಾಲ್ ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದರು.

**ತಾಲೂಕು ಮಟ್ಟದ ಪಂಚಮಸಾಲಿ ಸಮಾವೇಶ, ಕಿತ್ತೂರು ಚೆನ್ನಮ್ಮ ವಿಜಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಸಿ.ಸಿ. ಪಾಟೀಲ**

# 2ಎ ಮೀಸಲಾತಿ ಹೋರಾಟ ನಿಲ್ಲಬಾರದು

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಮಾಜದಲ್ಲಿ ಭಿನ್ನಾಭಿಪ್ರಾಯ ಸಹಜ. ಅದೆಲ್ಲವನ್ನೂ ಬಿಟ್ಟು ಸಮಾಜ ಕಟ್ಟುವುದು ಅಗತ್ಯ. ಪಂಚಮಸಾಲಿ ಸಮಾಜವನ್ನು ಸದೃಢವಾಗಿ ಕಟ್ಟಬೇಕು. ಸಮಾಜವನ್ನು ಆರ್ಥಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಮತ್ತಷ್ಟು ಮುನ್ನೆಲೆಗೆ ತರುವಂತಹ ಕೆಲಸವನ್ನು ಎಲ್ಲರೂ ಸೇರಿ ಮಾಡಬೇಕು ಎಂದು ಮಾಜಿ ಸಚಿವ, ಹಾಲಿ ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಅವರು ಶುಕ್ರವಾರ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಏರ್ಪಡಿಸಿದ್ದ ತಾಲೂಕು ಮಟ್ಟದ ಬೃಹತ್ ಸಮಾವೇಶ, ಕಿತ್ತೂರ ರಾಣಿ ಚೆನ್ನಮ್ಮರ 201ನೇ ವಿಜಯೋತ್ಸವ ಹಾಗೂ 247ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

2ಎ ಮೀಸಲಾತಿ ಹೋರಾಟ ನಿಲ್ಲಬಾರದು. ಪಂಚಮಸಾಲಿ



ಸಮಾಜಕ್ಕೆ 2ಎ ಮೀಸಲಾತಿ ನೀಡಬೇಕೆಂದು ಈಗಾಗಲೇ ಶ್ರೀಗಳ ನೇತೃತ್ವದಲ್ಲಿ ಹೋರಾಟಗಳು ನಡೆದಿವೆ. ಪಾಲಕರು ತಮ್ಮ ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸ ಒದಗಿಸಬೇಕು. ಪಂಚಮಸಾಲಿ ಸಮಾಜ ಯಾರಿಗೂ, ಎಂದಿಗೂ ಕೇಡು ಬಯಸಿದ ಸಮಾಜವಲ್ಲ. ಸಮಾಜದ ಬಲವರ್ಧನೆಗೆ ಗುರು, ಹಿರಿಯರ ಆಶೀರ್ವಾದ ಮುಖ್ಯ. ಕಿತ್ತೂರ ರಾಣಿ ಚೆನ್ನಮ್ಮ ಸ್ವಾತಂತ್ರ್ಯ ಹೋರಾಟದ ಬೆಳ್ಳಿ ಚುಕ್ಕಿ. ಬ್ರಿಟಿಷರ ವಿರುದ್ಧ ಹೋರಾಡಿದ ಕಿತ್ತೂರ ರಾಣಿ ಚೆನ್ನಮ್ಮನ ಧೈರ್ಯ, ಸಾಹಸ ಎಲ್ಲರಿಗೂ ಸ್ಫೂರ್ತಿ. ಚೆನ್ನಮ್ಮ ಸ್ವಾಭಿಮಾನದ ಸಂಕೇತ. ಸ್ವಾಭಿಮಾನ ಬಿಟ್ಟುಕೊಡದೇ ಬ್ರಿಟಿಷ್ ಸರ್ಕಾರದ ವಿರುದ್ಧ ಸಿಡಿದೆದ್ದು ನಿಂತ ವೀರರಾಣಿ ಕಿತ್ತೂರ ಚೆನ್ನಮ್ಮ ಅವರ ಹೋರಾಟ ಎಲ್ಲರಿಗೂ ಸ್ಫೂರ್ತಿಯಾಗಿದೆ. ಪಟ್ಟಣದಲ್ಲಿ ನಿರ್ಮಿಸಲಿರುವ ವೀರರಾಣಿ ಕಿತ್ತೂರು ಚೆನ್ನಮ್ಮ

ಹರಿಹರ ಪೀಠದ ವಚನಾನಂದ ಶ್ರೀಗಳು ಮಾತನಾಡಿ, ಕೂಡಲಸಂಗಮ ಮತ್ತು ಹರಿಹರ ಪೀಠದ ಜಗದ್ಗುರುಗಳು ಒಂದಾಗಿದ್ದೇವೆ. ಪಂಚಮಸಾಲಿ ಸಮಾಜದವರು ದ್ವೇಷ ಬಿಟ್ಟು ಪ್ರೀತಿಯಿಂದ ಸಮಾಜ ಸಂಘಟನೆಗೆ ಮುಂದಾಗಬೇಕು. ಸ್ತ್ರೀಯರು ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮಾಡಿ ತೋರಿಸಬಹುದು ಎಂಬುದಕ್ಕೆ ಚೆನ್ನಮ್ಮನೇ ಪ್ರೇರಣೆ, ಹೀಗಾಗಿ ಅವರ ಬದುಕು ಎಲ್ಲರಿಗೂ ಆದರ್ಶವಾಗಿದೆ ಎಂದರು.

ವೃತ್ತಕ್ಕೆ ಒಂದು ಲಕ್ಷ ರೂ ದೇಣಿಗೆ ನೀಡುವುದಾಗಿ ಭರವಸೆ ನೀಡಿದರು.

ಇದಕ್ಕೂ ಮೊದಲು ಮ್ಯಾಗೇರಿ ಓಣಿಯಿಂದ ಅಶ್ವಾರೂಢಳಾದ ಕಿತ್ತೂರು ಚೆನ್ನಮ್ಮನ ಮೂರ್ತಿಯ ಭವ್ಯ ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ನಡೆಯಿತು. ಶಿರಹಟ್ಟಿಯ ಜ.ಫ. ಸಿದ್ದರಾಮ ಶ್ರೀಗಳು ಆಶೀರ್ವಚನ ನೀಡಿದರು. ಸಮಾಜದ ತಾಲೂಕು ಅಧ್ಯಕ್ಷ ಬಸವರಾಜ ತುಳಿ ಪ್ರಾಸ್ತಾವಿಕ ಮಾತನಾಡಿದರು. ಸೋಮನಗೌಡ ಮಾಲಿಪಾಟೀಲ, ಅಶೋಕ ಪಲ್ಲೇದ, ವಿ.ವಿ. ಕಪ್ಪತ್ತನವರ, ಶಿವಪ್ರಕಾಶ ಮಹಾಜನಶೆಟ್ಟರ, ಡಾ. ಪ್ರಕಾಶ ಹೊಸಮನಿ, ಸಿ.ಸಿ. ನೂರಶೆಟ್ಟರ, ಸೋಮಣ್ಣ ಡಾಣಗಲ್ಲ, ಈರಣ್ಣ ಕರಿಬಿಷ್ಠಿ, ಎಸ್.ವಿ. ಪಲ್ಲೇದ, ಶರಣು ಪಾಟೀಲ, ವೀರನಗೌಡ ಪಾಟೀಲ, ಎಸ್.ಬಿ. ಹೊಸೂರ, ಯಲ್ಲಪ್ಪ ಇಂಗಳಗಿ, ಬಸವರಾಜ ಚಿಕ್ಕತೆ-ೞಟದ, ಬಸವರಾಜ ವಡವಿ, ಮುತ್ತು ಭಾವಿಮನಿ, ಸಂದೀಪ ಕಪ್ಪತ್ತನವರ, ತಿಮ್ಮರಡ್ಡಿ ಮರಡ್ಡಿ, ಕರಬಸಪ್ಪ ಹಂಚನಾಳ, ಎಂ.ಪಿ. ಹಣಜಿ, ಮಂಜುನಾಥ ಮಗಡಿ, ಬಸವಣ್ಣೆಪ್ಪ ತುಳಿ ಮುಂತಾದವರು ಉಪಸ್ಥಿತರಿದ್ದರು.

# ಗುರು-ಹಿರಿಯರ ಮಾರ್ಗದರ್ಶನದಲ್ಲಿ ಸಾಗಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಮಕ್ಕಳ ದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳೆ ಭಾಗೀರತಿ ಬಣಗಾರ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಗುರು-ಹಿರಿಯರ ಮಾತುಗಳನ್ನು ಆಲಿಸಿ ಉತ್ತಮ ಮಾರ್ಗದರ್ಶನದಲ್ಲಿ ನಡೆದರೆ ಜೀವನದಲ್ಲಿ ಸೋಲುವ ಮಾತೇ ಇಲ್ಲ ಎಂದರು.

ಅಧ್ಯಕ್ಷತೆ ವಹಿಸಿದ ಪ್ರಾಚಾರ್ಯೆ ಸ್ವಾತಿ ಪೈ ಮಾತನಾಡಿ, ಮಕ್ಕಳೆಂದರೆ ಮುಗ್ಧ ಮನಸ್ಸಿನ ಮೊಗ್ಗುಗಳು, ಮುಗ್ಧತೆಯ ತೋಟದಲ್ಲಿ ಅರಳುವ ಹೂಗಳು. ಪ್ರೀತಿಯ ಕಂಪು ಸೂಸುತ್ತಾ ನಗುವ ಕಂದಮ್ಮಗಳು ಎಲ್ಲರ ಬಾಳಿನ ಬೆಳಕಾಗಿ, ಹೆತ್ತವರ ಬದುಕಿಗೆ ಊರುಗೋಲಾಗಿ ದೇಶದ ಸತ್ಪ್ರಜೆಯಾಗುವ ಕುಡಿಗಳು ಎಂದು ಅಭಿಪ್ರಾಯಪಟ್ಟರು. ವಿದ್ಯಾರ್ಥಿಗಳಿಗೆ ಡಕ್ ವಾಕ್, ಕ್ರಾಬ್ ವಾಕ್, ಹೆನ್ ವಾಕ್, ಫ್ರಾಗ್ ರೇಸ್, ಬುಕ್ ಬ್ಯಾಲೆನ್ಸಿಂಗ್ ಮುಂತಾದ ಸ್ಪರ್ಧೆಗಳನ್ನು ನಡೆಸಲಾಯಿತು. ವಿದ್ಯಾರ್ಥಿಗಳಿಗೆ ಸ್ವತಂತ್ರ ಹೋರಾಟಗಾರರು, ಉದ್ಯೋಗಸ್ಥರು, ಹೂಗಳು, ಹಣ್ಣು-ತರಕಾರಿಯಂತಹ ವೇಷ-ಭೂಷಣಗಳ ಸ್ಪರ್ಧೆ ನಡೆಯಿತು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಮಂಜುಳಾ ಪಾಟೀಲ, ವಿನಾಯಕ ದೊಡ್ಮನಿ, ಪವಿತ್ರ ಕಾರಬಾರಿ, ವೀಣಾ ಜಾಮನೂರ, ಲೀಲಾವತಿ ಬೆಳಗಟ್ಟಿ, ವಿಜಯಲಕ್ಷ್ಮೀ ಮಹಾರಾಜಪೇಠ, ಸಿಮ್ರನ್ ನಾಡಿಗೇರ, ಆಶಾ ಜಾಧವ್ ಮಕ್ಕಳಿಗೆ ಬಹುಮಾನ ವಿತರಿಸಿದರು.

# ಉತ್ತಮ ಶಿಕ್ಷಣದೊಂದಿಗೆ ಸಾಧಕರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ ಗದಗ, ಮಂಜು ಶಿಕ್ಷಣ ಸಂಸ್ಥೆ, ಬೆಟಗೇರಿ-ಗದಗ ಸಂಯುಕ್ತಾಶ್ರಯದಲ್ಲಿ ಮಂಜು ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶುಕ್ರವಾರ ಮಕ್ಕಳ ದಿನಾಚರಣೆಯನ್ನು ಆಚರಿಸಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ಸಿ.ಎಸ್. ಶಿವನಗೌಡ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳೆಲ್ಲಾ ಚೆನ್ನಾಗಿ ಅಭ್ಯಾಸ ಮಾಡಿ, ದೇಶದ ಒಳ್ಳೆಯ ನಾಗರಿಕರಾಗಿ ಬೆಳೆಯಬೇಕು. ಸರ್ಕಾರ ಉಚಿತವಾಗಿ ಶಿಕ್ಷಣ ಸೇರಿದಂತೆ ಹಲವು ಸೌಲಭ್ಯ ನೀಡುತ್ತಿದ್ದು, ಇದರ ಪ್ರಯೋಜನ ಪಡೆದು ಸಾಧನೆಯ ಹಾದಿಯಲ್ಲಿ ನಡೆಯಬೇಕು ಎಂದು ಕರೆ ನೀಡಿದರು.

ಮಂಜು ಶಿಕ್ಷಣ ಸಂಸ್ಥೆಯ ಶಂಕರಸಿಂಗ್ ಎಸ್.ರಜಪೂತ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಸಹಾಯಕ ಕಾನೂನು ನೆರವು ಅಭಿರಕ್ಷಕರಾದ ಗುರುರಾಜ ಗೌರಿ, ಸುವರ್ಣಾ ಅಕ್ಕಿ, ಪ್ಯಾನಲ್ ವಕೀಲರು, ವಿರೇಂದ್ರಸಿಂಗ್ ರಜಪೂತ, ವಿನಾಯಕಸಿಂಗ್ ರಜಪೂತ ಸೇರಿದಂತೆ ಸಿಬ್ಬಂದಿಗಳು ಹಾಗೂ ಮಂಜು ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮಕ್ಕಳು ಉಪಸ್ಥಿತರಿದ್ದರು.



# ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಅಭೂತಪೂರ್ವ ಜಯ ದೊರೆತ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ರೋಣ ಮಂಡಲದಿಂದ ಪಟ್ಟಣದ ಕಾಲಕಾಲೇಶ್ವರ ವೃತ್ತದಲ್ಲಿ ಪಕ್ಷದ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ದೇಶಾದ್ಯಂತ ಮತಗಳ್ಳತನ ನಡೆದಿದೆ ಎಂಬ ಸುಳ್ಳು ಸುದ್ದಿ ಹರಡಿಸುವ ಮೂಲಕ ಅಪಪ್ರಚಾರದ ಅಭಿಯಾನ ಕೈಗೊಂಡ ಕಾಂಗ್ರೆಸ್ ಪಕ್ಷಕ್ಕೆ ಹಾಗೂ ರಾಹುಲ್ ಗಾಂಧಿಗೆ ಬಿಹಾರ ಜನರು ತಕ್ಕ ಪಾಠ ಕಲಿಸಿದ್ದಾರೆ ಎಂದು ಶಿವಾನಂದ ಮಠದ ಹೇಳಿದರು.

ಬಾಲಾಜಿರಾವ್ ಬೊಸ್ಲೆ ಮಾತನಾಡಿ, ಇದೇ ಮೊದಲ ಬಾರಿಗೆ ಬಿಹಾರದಲ್ಲಿ ಎನ್‌ಡಿಎ ಮೈತ್ರಿಗೆ 200ಕ್ಕೂ ಅಧಿಕ ಸ್ಥಾನಗಳಲ್ಲಿ ಗೆಲುವು ದೊರೆತಿದ್ದು ಮೋದಿ ಜನಪ್ರೀಯತೆಗೆ ಸಾಕ್ಷಿಯಾಗಿದೆ. ಕಾಂಗ್ರೆಸ್ ಪಕ್ಷವೇ ದೊಡ್ಡ ಕಳ್ಳರ ಪಾರ್ಟಿಯಾಗಿದೆ. ತನ್ನ ತಪ್ಪನ್ನು ಮುಚ್ಚಿ ಹಾಕಲು ಇನ್ನೊಬ್ಬರ ಮೇಲೆ ಗೂಬೆ ಕೂರಿಸುವ ಕೆಲಸ ರಾಹುಲ್ ಗಾಂಧಿ ಮಾಡಿದ್ದರಿಂದ ಬಿಹಾರದಲ್ಲಿ ಕಾಂಗ್ರೆಸ್ ನೆಲಕಚ್ಚಿದೆ ಎಂದರು.

ಈ ಸಂದರ್ಭದಲ್ಲಿ ಉಮೇಶ ಮಲ್ಲಾಪುರ, ಕರಣ್ ಬಂಡಿ, ರಾಜೇಂದ್ರ ಘೋರ್ಪಡೆ, ಮುದಿಯಪ್ಪ ಕರಡಿ, ಡಿ.ಜಿ. ಕಟ್ಟಿಮನಿ, ಪರಸಪ್ಪ ಪೂಜಾರ, ಪರಶು ಗುಡದೂರ, ಆರ್.ಕೆ. ಚವ್ಹಾಣ, ಮುತ್ತಯ್ಯ ಕರಡಿಮಠ, ಅಂದಪ್ಪ ಅಂಗಡಿ, ಶಿವಕುಮಾರ ಜಾಧವ್, ಮಹಾಂತೇಶ ಪೂಜಾರ, ಹನಮಂತ ಹಟ್ಟಿಮನಿ, ದೇವರಾಜ ವರಗಾ, ಅಶೋಕ ಮಾದರ ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಮರಳಾದ ಸಾಲುಮರದ ತಿಮ್ಮಕ್ಕ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಲು ಸಾಲು ಮರಗಳನ್ನು ನೆಟ್ಟು ಅಮರಳಾದ ತಿಮ್ಮಕ್ಕ ಪರಿಸರದ ಬಗ್ಗೆ ಹೊಂದಿದ್ದ ಕಾಳಜಿ ಅವಿಸ್ಮರಣೀಯ. ವನದೇವತೆ ಎಂಬ ಖ್ಯಾತಿ ಪಡೆದು ಪರಿಸರ ಪ್ರೇಮಿಗಳಿಗೆಲ್ಲ ಮಾದರಿಯಾಗಿದ್ದ ಅವಳು ಇಂದು ನಮ್ಮನ್ನು ಅಗಲಿರುವುದು ನೋವಿನ ಸಂಗತಿ ಎಂದು ಡಂಬಳ-ಗದಗ ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಂಬನಿ ಮಿಡಿದಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಶ್ರೀಗಳು, ಗಿಡ-ಮರಗಳನ್ನು ಮಕ್ಕಳಂತೆ ಸಾಕಿ ಸಲುಹಿದ ತಿಮ್ಮಕ್ಕ ವೃಕ್ಷಮಾತೆ ಎಂದೇ ಚಿರಪರಿಚಿತಳು. ಗಿಡಮರಗಳ ಮಹತ್ವವನ್ನು ತಿಳಿಸುತ್ತ ಪರಿಸರ ಜಾಗೃತಿಗಾಗಿ ಅಹರ್ನಿಶಿ ಶ್ರಮಿಸಿದ ಅವಳು ದಂತಕತೆಯಾಗಿದ್ದಾಳೆ. ಪದ್ಮ ಪ್ರಶಸ್ತಿ ವಿಭೂಷಿತಳಾಗಿ, ಕರ್ನಾಟಕದ ಹಿರಿಮೆ-ಗರಿಮೆಗೆ ಕಾರಣಳಾಗಿದ್ದ ಅವಳ ಆಶೋತ್ತರಗಳನ್ನು ಕರ್ನಾಟಕ ಸರಕಾರ ಈ ಡ' ೀ ರಿ ಸ' ೨ ವ' ಮೂಲಕ ತಿಮ್ಮಕ್ಕನಿಗೆ ಗೌರವ ಸಲ್ಲಿಸಬೇಕು ಮತ್ತು ಅವಳ ಆತ್ಮಕ್ಕೆ ದೇವರು ಚಿರಶಾಂತಿಯನ್ನು ದಯಪಾಲಿಸಲಿ ಎಂದು ಶ್ರೀಗಳು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಬಿಹಾರ ಫಲಿತಾಂಶ: ಎನ್‌ಡಿಎ ಮೈತ್ರಿಕೂಟ ಹಣದ ಹೊಳೆಯನ್ನೇ ಹರಿಸಿದೆ!

■ ವಿಜಯಸಾಕ್ಷಿ ಸುದ್ದಿ, ಮಡಿಕೇರಿ

ಬಿಹಾರದಲ್ಲಿ ಗೆಲ್ಲಲು ಎನ್‌ಡಿಎ ಹಣದ ಹೊಳೆಯೇ ಹರಿಸಿದೆ ಎಂದು ಸಿಎಂ ಕಾನೂನು ಸಲಹೆಗಾರ ಪೊನ್ನಣ್ಣ ವಾಗ್ದಾಳಿ ಮಾಡಿದ್ದಾರೆ.

ಬಿಹಾರ ಚುನಾವಣಾ ಫಲಿತಾಂಶಗಳ ಕುರಿತು ಮಡಿಕೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಚುನಾವಣೆ ಆಗುವವರೆಗೂ ರಾಜಕೀಯ ಮಾತುಗಳನ್ನು ಆಡಬಹುದು, ಫಲಿತಾಂಶ ಬಂದಾಗ ಜನರ ಅಭಿಪ್ರಾಯಕ್ಕೆ ತಲೆಬಾಗಬೇಕಾಗುತ್ತದೆ. ಜನರ ತೀರ್ಪನ್ನು ಸ್ವೀಕಾರ ಮಾಡಬೇಕು. ಆದ್ರೆ ಈ ಚುನಾವಣೆಯಲ್ಲಿ ಎನ್‌ಡಿಎ ಹಣದ ಹೊಳೆಯನ್ನೇ ಹರಿಸಿದೆ ಎಂದು ಕಿಡಿ ಕಾರಿದರು.

ಚುನಾವಣೆ ಘೋಷಣೆಗೂ ಮುನ್ನವೇ ಪ್ರತಿ ಮಹಿಳೆಯರ ಖಾತೆಗೆ 10,000 ರೂ. ನೇರವಾಗಿ ವರ್ಗಾವಣೆ ಮಾಡಿದ್ದಾರೆ.

# ಗ್ರಾಮೀಣ ಭಾರತದ ಪ್ರಗತಿಗಾಗಿ ನೆಹರು ಸಹಕಾರ ಕ್ಷೇತ್ರಕ್ಕೆ ಪ್ರೇರಣೆ ನೀಡಿದರು: ಸಿ.ಎಂ.ಸಿದ್ದರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗ್ರಾಮೀಣ ಭಾರತದ ಪ್ರಗತಿಗಾಗಿ ನೆಹರು ಅವರು ಸಹಕಾರ ಕ್ಷೇತ್ರಕ್ಕೆ ಚೈತನ್ಯ ನೀಡಿದರು. ಹೀಗಾಗಿ ಸಹಕಾರಿ ಚಳವಳಿ ಲಕ್ಷಾಂತರ ಕುಟುಂಬಗಳ ಆರ್ಥಿಕ ಮೂಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ಪಟ್ಟರು.

ನೆಹರು ಜನ್ಮದಿನದ ಪ್ರಯುಕ್ತ 72ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಉದ್ಘಾಟಿಸಿ, ಸಹಕಾರಿ ಪುರಸ್ಕೃತರಿಗೆ 'ಸಹಕಾರ ರತ್ನ' ಪ್ರಶಸ್ತಿಯನ್ನು ವಿತರಿಸಿ ಅವರು ಮಾತನಾಡಿದರು.

ಏಷ್ಯಾದಲ್ಲೇ ಮೊದಲ ಬಾರಿಗೆ ಸಹಕಾರಿ ಬ್ಯಾಂಕ್ ಸ್ಥಾಪನೆಯಾಗಿದ್ದು ನಮ್ಮ ರಾಜ್ಯದಲ್ಲಿ. ಹೀಗಾಗಿ ಕರ್ನಾಟಕವನ್ನು ಭಾರತದ ಸಹಕಾರ ಕ್ಷೇತ್ರದ ರಾಜಧಾನಿ ಎಂದು ಕರೆಯುತ್ತಾರೆ.

# ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರಕಾರಿ ಶಾಲೆಗಳ ಪ್ರಗತಿಯಲ್ಲಿ ಪೋಷಕರ ವಿಶ್ವಾಸ ಮತ್ತು ಸಹಕಾರ ಅತಿ ಮಹತ್ವದ್ದಾಗಿದ್ದು, ಶಾಲೆಗಳು ಸಮಾಜದಲ್ಲಿನ ಒಂದು ಭಾಗವಿದ್ದಂತೆ. ಅವುಗಳ ಬೆಳವಣಿಗೆಗೆ ಸಮಾಜದ ಪ್ರತಿಯೊಬ್ಬರ ಪಾತ್ರ ಮುಖ್ಯವಾಗಿದೆ ಎಂದು ಪುರಸಭೆ ಮಾಜಿ ಅಧ್ಯಕ್ಷ ಎಂ.ಆರ್. ಪಾಟೀಲ ಹೇಳಿದರು.

ಅವರು ಪಟ್ಟಣದ ಹಿರಿಯ ಮಾದರಿ ಸರಕಾರಿ ಪ್ರಾಥಮಿಕ ಶಾಲೆ ನಂ. 1ರಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಶುಕ್ರವಾರ ಮಕ್ಕಳ ದಿನಾಚರಣೆ ಅಂಗವಾಗಿ ರಾಜ್ಯಾದ್ಯಂತ ಏರ್ಪಡಿಸಲಾಗಿದ್ದ ಶಿಕ್ಷಕರ-ಪೋಷಕರ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಸರಕಾರಿ ಶಾಲೆಗಳಲ್ಲಿ ಎಲ್ಲ ರೀತಿಯ ಸೌಲಭ್ಯಗಳು ಮಕ್ಕಳಿಗೆ ದೊರೆಯುತ್ತಿವೆ. ನುರಿತ, ಅನುಭವಿ ಶಿಕ್ಷಕರು ಸರಕಾರಿ ಶಾಲೆಗಳಲ್ಲಿಯೂ ಇದ್ದು, ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯಲಿದೆ. ಪಾಲಕರು ಆದಷ್ಟು ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸಬೇಕು. ಶಿಕ್ಷಕರು ಮತ್ತು ಪೋಷಕರ ಸಹಕಾರ ಶಾಲೆಗಳ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಸಮಾಜಸೇವಕ ಶಂಕರ ಬ್ಯಾಡಗಿ ಮಾತನಾಡಿ, ಸರಕಾರಿ ಶಾಲೆಗಳಿಗೆ ಪೋಷಕರೇ ಆಧಾರ. ಅವರ ಸಹಕಾರವೇ ಶಾಲೆಗಳ ಬೆಳವಣಿಗೆಗೆ ಕಾರಣ. ಅನೇಕ ಸರಕಾರಿ ಶಾಲೆಗಳಿಗೆ ಪೋಷಕರು, ದಾನಿಗಳು ನೀಡಿದ ಸಹಕಾರದಿಂದ ಅನೇಕ ಸೌಲಭ್ಯಗಳ ಲಭ್ಯವಾಗಿವೆ. ಉತ್ತಮ ಶಿಕ್ಷಣ ದೊರೆಯುತ್ತಿರುವ ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸುವದರಿಂದ ಅನೇಕ ಉಪಯೋಗಗಗಳು ದೊರೆಯುತ್ತಿವೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ ಶಿಕ್ಷಕರ-ಪೋಷಕರ ಸಭೆಯ ಮಹತ್ವ ವಿವರಿಸಿ, ಮಕ್ಕಳ ಪೋಷಕರು ಶಾಲೆಯ ಮಹತ್ವದ ಆಸ್ತಿಗಳಿದ್ದಂತೆ. ಅವರ ಸಹಕಾರದಿಂದ ಶಾಲೆಯಲ್ಲಿ ಅನೇಕ ಕ್ರಿಯಾತ್ಮಕ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತವೆ. ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸಲು ಆದ್ಯತೆ ನೀಡಬೇಕು. ಶಾಲೆಗಳಲ್ಲಿ ದೊರೆಯುವ ಪ್ರಯೋಜನಗಳ ಕುರಿತು ವಿವರಿಸಿದರು.

ಸಭೆಯ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಶಿರಬಡಗಿ ವಹಿಸಿದ್ದರು. ದಿಗಂಬರ ಪೂಜಾರ, ಇಸಿಓ ರಾಘವೇಂದ್ರ ಜೋಶಿ, ಸಿಆರ್‌ಪಿ ಉಮೇಶ ನೇಕಾರ, ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರಾದ ಇ.ಎಚ್. ಪೀಟರ್, ಎಫ್.ಎಚ್. ನದಾಫ್, ಎಸ್.ಎಸ್. ಮಹಾಲಿಂಗಶೆಟ್ಟರ, ಅಕ್ಷತಾ ಕಾಟೇಗಾರ, ಖುದುಶಿಯಾ ನದಾಫ್ ಸೇರಿದಂತೆ ನೂರಾರು ಪಾಲಕರು ಪಾಲ್ಗೊಂಡಿದ್ದರು.

**ಹಿರೇಮಠದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡ ಶಾಸಕ ಜಿ.ಎಸ್. ಪಾಟೀಲ ನುಡಿ**

# ಶ್ರೀಗಳ ಕಾರ್ಯಕ್ಕೆ ಸಹಕಾರ ನೀಡಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾವು ಪೂಜಿಸುವ ದೇವರು ನಿರಾಕಾರ ಸ್ವರೂಪನಾಗಿದ್ದಾನೆ. ಆದರೆ ಮಾನವನು ಆಯಾ ದೇವರುಗಳ ಗುಣ ವಿಶೇಷತೆಗಳ ಆಧಾರದ ಮೇಲೆ, ಪುರಾಣದ ಕಥೆಗಳ ಆಧಾರದಿಂದ ಅವನಿಗೆ ವಿವಿಧ ರೀತಿಯ ಆಕಾರಗಳನ್ನು ನೀಡಿ ಪೂಜಿಸುತ್ತಿರುವುದು ನಮ್ಮ ಹಿಂದೂ ಪದ್ಧತಿಯಲ್ಲಿ ಹಿಂದಿನಿಂದಲೂ ಸಾಗಿ ಬಂದ ಸಂಪ್ರದಾಯವಾಗಿದೆ. ಅದರಲ್ಲಿಯೂ ಶ್ರೀ ವೀರಭದ್ರ ದೇವರನ್ನು ಅತ್ಯಂತ ಉಗ್ರ ದೇವರು ಎಂದೇ ನಂಬಿ, ಭಯ-ಭಕ್ತಿಗಳಿಂದ ಅವನನ್ನು ಪೂಜಿಸುತ್ತ ಬಂದಿದ್ದೇವೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಹಿರೇಮಠದಲ್ಲಿ ನಡೆಯುತ್ತಿರುವ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನರೇಗಲ್ಲ ಹಿರೇಮಠಕ್ಕೆ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಪೀಠಾಧಿಪತಿಗಳಾದ ನಂತರ ನರೇಗಲ್ಲ ಹಿರೇಮಠ ಮತ್ತು ನರೇಗಲ್ಲದ ಕೀರ್ತಿ ಇಡೀ ನಾಡಿನ ತುಂಬ ಹಬ್ಬಿರುವುದು ಸಂತಸದ ಸಂಗತಿ.

ಷ.ಬ್ರ.ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ನಿನ್ನೆಯ ದಿನ ಶ್ರೀ ವೀರಭದ್ರ ದೇವರು-ಭದ್ರಕಾಳಿ ಅಮ್ಮನವರ ಮದುವೆಯನ್ನು ಅತ್ಯಂತ ಸಡಗರ-ಸಂಭ್ರಮಗಳಿಂದ ಮಾಡಿದ್ದೀರಿ ಎಂದು ತಿಳಿಸಿ, ನಂತರ ಅವರಿಬ್ಬರೂ ಸೇರಿ ಈ ಜಗತ್ತಿನ ಕಲ್ಯಾಣವನ್ನು ಹೇಗೆ ಮಾಡಿದರು, ದುಷ್ಟರನ್ನೆಲ್ಲ ಹೇಗೆ ಸೆದೆಬಡಿದರು ಎಂಬುದರ ವಿವರಣೆಯನ್ನು ನೀಡಿದರು.

ಸಿದ್ಧಾಂತ ಶಿಖಾಮಣಿ ಪ್ರವಚನವನ್ನು ಹೇಳುವುದರಲ್ಲಿ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ನಾಡಿನಲ್ಲಿಯೇ ಹೆಸರುವಾಸಿಯಾಗಿದ್ದಾರೆ. ಇದು ನಮಗೆಲ್ಲರಿಗೂ ಹೆಮ್ಮೆ ಮತ್ತು ಅಭಿಮಾನದ ವಿಷಯವಾಗಿದೆ. ಶ್ರೀಗಳವರು ಯೋಜಿಸುವ ಪ್ರತಿ ಕಾರ್ಯಕ್ರಮಕ್ಕೂ ಭಕ್ತರು ಹೆಚ್ಚಿನ ಉತ್ತೇಜನವನ್ನು ನೀಡಬೇಕು ಎಂದರು.

ಯುವ ಧುರೀಣ ಅಕ್ಷಯ ಪಾಟೀಲ ಮಾತನಾಡಿ, ಸಾಧು-ಸಂತರ ಸಂಗಡ ಸಮಯ ಕಳೆಯುವುದನ್ನೇ ಸತ್ಸಂಗ ಎನ್ನುತ್ತಾರೆ. ಇಂತಹ ಸತ್ಸಂಗ ಶ್ರೀ ಹಿರೇಮಠದ ಜಾತ್ರಾ ಮಹೋತ್ಸವದ ನೆಪದಲ್ಲಿ ಪ್ರತಿ ವರ್ಷ ದೊರಕುತ್ತಿರುವುದಕ್ಕೆ ನಾವೆಲ್ಲರೂ ಭಾಗ್ಯಶಾಲಿಗಳು. ಶ್ರೀ ವೀರಭದ್ರೇಶ್ವರ ಚರಿತಾಮೃತವನ್ನು ಆಲಿಸಿ, ಶ್ರೀ ವೀರಭದ್ರೇಶ್ವರನ ಗುಣಗಳನ್ನು ಪ್ರಸಂಗ ಬಂದಾಗ ಜೀವನದಲ್ಲಿ ಪ್ರದರ್ಶಿಸಬೇಕೆಂದು ಹೇಳಿದರು.

ಸಭೆಯನ್ನುದ್ದೇಶಿಸಿ ಡಾ. ಕೆ.ಬಿ. ಧನ್ನೂರ, ಶಿವನಗೌಡ ಪಾಟೀಲ ಮಾತನಾಡಿದರು. ವೇದಿಕೆಯ ಮೇಲೆ ಮೈಲಾರಪ್ಪ ಚಳ್ಳಮರದ, ಅಂಜುಮನ್ ಇಸ್ಲಾಂ ಕಮಿಟಿ ಅಧ್ಯಕ್ಷ ಫಕ್ರುಸಾಬ ರೇವಡಿಗಾರ, ಖಾದರಬಾಷಾ ಹೂಲಗೇರಿ, ಅಲ್ಲಾಬಕ್ಷಿ ನದಾಫ್, ಶೇಖಪ್ಪ ಜುಟ್ಲ ಇನ್ನಿತರರಿದ್ದರು.

# ಭವ್ಯ ಆಡಳಿತಕ್ಕೆ ಬಿಹಾರ ಜನರ ಬಹುಮತ



■ವಿಜಯಸಾಕ್ಷಿ ಸುದ್ದಿ, ಗದಗ

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎಗೆ ಬಹುಮತ ನೀಡುವ ಮೂಲಕ ಜನರು ಪ್ರಧಾನಿ ನರೇಂದ್ರ ಮೋದಿ ಹಾಗೂ ನಿತೀಶ್ ಕುಮಾರ ನೇತೃತ್ವದ ಭದ್ರ ಹಾಗೂ ಭವ್ಯ ಆಡಳಿತಕ್ಕೆ ವಿಜಯಮಾಲೆ ತೊಡಿಸಿದ್ದಾರೆ ಎಂದು ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ಸೇರಿದಂತೆ ದೇಶದ ಜನರ ವಿಶ್ವಾಸ ಕಳೆದುಕೊಂಡಿರುವ ಕೆಲವು ಪಕ್ಷಗಳು ಸೇರಿ ಬಿಜೆಪಿಯನ್ನು ಕಟ್ಟಿಹಾಕುವ ಕನಸು ಕಾಣುತ್ತಿದ್ದವು. ಆದರೆ ಬಿಹಾರ ಜನತೆ ಬಿಜೆಪಿ ನೇತೃತ್ವದ ಡಬಲ್ ಇಂಜಿನ್ ಸರ್ಕಾರಕ್ಕೆ ಮಣೆ ಹಾಕಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ. ನಡ್ಡಾ, ಕೇಂದ್ರ ಸಚಿವ ಅಮಿತ್ ಷಾ ಸೇರಿದಂತೆ ಬಿಜೆಪಿ ಗಣ್ಯರ ದೂರದೃಷ್ಟಿಗೆ ಬಿಹಾರದ ಜನ ಪುರಸ್ಕಾರ ನೀಡಿದ್ದಾರೆ. ಕುಟುಂಬ ರಾಜಕಾರಣವನ್ನೇ ನಂಬಿಕೊಂಡು ಪ್ರಧಾನಿ ಮೋದಿಯವರ ಯಶಸ್ಸಿನಿಂದ ಕಂಗೆಟ್ಟಿರುವ ರಾಹುಲ್ ಗಾಂಧಿ ಮತಗಳ್ಳತನದ ಸುಳ್ಳು ಆರೋಪ ಹೊರಿಸುತ್ತಾ ಜನರ ದಿಕ್ಕು ತಪ್ಪಿಸುವ ವಿಫಲ ಯತ್ನ ಮಾಡುತ್ತಿದ್ದಾರೆ.

ಕಾಂಗ್ರೆಸ್ ಪಕ್ಷದ ಅಧೋಗತಿಗೆ ಕಾರಣರಾಗಿರುವ ರಾಹುಲ್ ಗಾಂಧಿ ಅವರನ್ನು ದೇಶದ ಭಾವಿ ಪ್ರಧಾನಿ ಎಂದು ಬಿಂಬಿಸಲು ಹೊರಟಿರುವ ಕಾಂಗ್ರೆಸ್ಸಿಗರ ಪರಿಸ್ಥಿತಿ ನಿಜಕ್ಕೂ ಹಾಸ್ಯಾಸ್ಪದವಾಗಿದೆ. ಓಲೈಕೆ ಹಾಗೂ ಪಾಳೇಗಾರಿಕೆ ರಾಜಕೀಯ-ಕ್ಕೆ ಬೆಲೆಯಿಲ್ಲ ಎಂಬುದು ಈ ಚುನಾವಣೆಯಿಂದ ಸಾಬೀತಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

**ತಾಲೂಕು ಮಟ್ಟದ ಪೋಷಕ-ಶಿಕ್ಷಕರ ಮಹಾಸಭೆಯನ್ನು ಉದ್ಘಾಟಿಸಿದ ತಾ.ಪಂ ಇಓ ಕೃಷ್ಣಪ್ಪ ಧರ್ಮರ**

# ವಿದ್ಯಾರ್ಥಿಗಳ ಅಭಿವೃದ್ಧಿಗಾಗಿ ಸಮನ್ವಯದಿಂದ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳ ಸರ್ವಾಂಗೀಣ ಪ್ರಗತಿಗಾಗಿ ಸರಕಾರ, ಸಮುದಾಯ, ಶಾಲಾಡಳಿತ, ಪಾಲಕರು, ಶಿಕ್ಷಕರು ಸಮನ್ವಯ ಸಾಧಿಸಿ ಸಮರ್ಪಣಾ ಭಾವದಿಂದ ಶ್ರಮಿಸಬೇಕು. ಆ ಕಾರಣಕ್ಕಾಗಿಯೇ ಸರ್ಕಾರ ರಾಜ್ಯದಾದ್ಯಂತ ಮಕ್ಕಳ ದಿನಾಚರಣೆಯ ಈ ದಿನದಂದು ವಿಶೇಷವಾಗಿ ಪೋಷಕ-ಶಿಕ್ಷಕರ ಮಹಾಸಭೆಯನ್ನು ಸಂಘಟಿಸಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಅಭಿಪ್ರಾಯಪಟ್ಟರು.

ಅವರು ಸರಕಾರಿ ಪ್ರೌಢಶಾಲೆ ಹುಲ್ಲೂರಿನಲ್ಲಿ ಶುಕ್ರವಾರ ನಡೆದ ಲಕ್ಷ್ಮೇಶ್ವರ ತಾಲೂಕಾ ಮಟ್ಟದ ಪೋಷಕ-ಶಿಕ್ಷಕರ ಮಹಾಸಭೆಯ ಸಾಂಕೇತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರೌಢಶಾಲಾ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಮಾತನಾಡಿ, ಪೋಷಕ-ಶಿಕ್ಷಕರ ಇಂದಿನ ಮಹಾಸಭೆಯಲ್ಲಿ ಸಂವಿಧಾನ ಪೀಠಿಕೆಯ ಓದು, ಪೋಷಕರಿಗೆ ಮಕ್ಕಳ ಕಲಿಕಾ ಪ್ರಗತಿ ಹಾಗೂ ಹಾಜರಾತಿ ಮಾಹಿತಿ, ಕಲಿಕಾ ಉಪಕ್ರಮಗಳು, ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪೋಷಕರ ಪಾತ್ರ, ಉತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳಿಗೆ ಅಭಿನಂದನೆ, ಪೋಷಕರಿಗೆ ಆರ್‌ಟಿಇ ಕಾಯ್ದೆ, ಮಕ್ಕಳ ಹಕ್ಕುಗಳು, ಮಕ್ಕಳ ರಕ್ಷಣಾ ನೀತಿ, ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ, ಬಾಲಕಾರ್ಮಿಕ ನಿಷೇಧ ಮುಂತಾದ ವಿಚಾರಗಳ ಬಗ್ಗೆ ಪಾಲ್ಗೊಂಡ ಎಲ್ಲಾ ಪೋಷಕರಿಗೆ ಅರಿವು ಮೂಡಿಸಲಾಗುತ್ತದೆ ಎಂದು ಹೇಳಿದರು.



ಆರಂಭದಲ್ಲಿ ತಾಲೂಕಾಡಳಿತದ ಪರವಾಗಿ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಹುಲ್ಲೂರು ಗ್ರಾಮ ಪಂಚಾಯಿತಿಯ ಸದಸ್ಯರು, ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು, ಊರಿನ ಪಾಲಕರು-ಪೋಷಕರು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಎಲ್ಲರೂ ಸಾಲಾಗಿ ನಿಂತು ವಿದ್ಯಾರ್ಥಿಗಳಿಗೆ ಹೂ ನೀಡಿ ಸ್ವಾಗತಿಸಿದ್ದು ವಿಶೇಷವಾಗಿತ್ತು.

ಸಭೆಯಲ್ಲಿ ತಾಲೂಕು ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿದ ಶಾಲಾ ತಂಡ, ಕ್ರೀಡಾಕೂಟಗಳಲ್ಲಿ ಸ್ಥಾನ ಪಡೆದ ವಿದ್ಯಾರ್ಥಿಗಳು ಹಾಗೂ ಉತ್ತಮ ಪರಿಸರ ಶಾಲೆ ಪ್ರಶಸ್ತಿ ಪಡೆದ ಕಾರಣಕ್ಕಾಗಿ ಶಾಲೆಯ ಮುಖ್ಯೋಪಾಧ್ಯಾಯರನ್ನು ಗೌರವಿಸಲಾಯಿತು.

ಹುಲ್ಲೂರು ಗ್ರಾ.ಪಂ ಮಾಜಿ ಅಧ್ಯಕ್ಷ ಮಹಬೂಬಅಲಿ ಗಾಡಗೋಳಿ, ಗ್ರಾಮದ ಹಿರಿಯರಾದ ನಾಗಪ್ಪ ಮೂಕಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಶಂಕ್ರಣ್ಣ ಮಾಗಡಿ, ಉಪಾಧ್ಯಕ್ಷೆ ರಜಿಯಾ ಬೇಗಂ ನದಾಫ್, ಶಾಲೆಯ ಶಿಕ್ಷಕ ಬಿ.ಎಸ್. ಕೊಪ್ಪದ ಮಾತನಡಿದರು.

ಮುಖ್ಯ ಅತಿಥಿಗಳಾಗಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ವೀಣಾ ಅಕ್ಕಿ, ಗ್ರಾಮದ ಹಿರಿಯರಾದ ಸಿದ್ದಯ್ಯ ಅಮೋಘಿಮಠ, ಶೇಖಣ್ಣ ಸಾಸಲವಾಡ, ವಿರೂಪಾಕ್ಷಪ್ಪ ಮೂಕಿ, ಉಮೇಶ ರಗಟಿ, ಚೆನ್ನಪ್ಪಗೌಡ ಪಾಟೀಲ, ಮಂಜುನಾಥ ರಗಟಿ, ಶಂಕ್ರಪ್ಪ ಮೂಕಿ, ನಿಂಗಪ್ಪ ಹೊಸೂರ, ಭರಮಜ್ಜ ಹಳ್ಳಿಗೊರವರ, ಕಬೀರ ನದಾಫ್, ಬಸಣ್ಣ ಮಾಗಡಿ, ಲಕ್ಷ್ಮಣ ಅತ್ತಿಗೇರಿ, ನೀಲಪ್ಪ ಹಳ್ಳಿಗೊರವರ ಮುಂತಾದವರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಕೆ.ವೈ. ಮೇಲಿನಮನಿ ಮಾತನಾಡಿ, ಹುಲ್ಲೂರಿನ ಗ್ರಾಮ ಪಂಚಾಯಿತಿ, ಎಸ್.ಡಿ.ಎಂ.ಸಿ ಹಾಗೂ ಪಾಲಕರ ಸಹಯೋಗದೊಂದಿಗೆ ಮಕ್ಕಳ ದಿನಾಚರಣೆಯನ್ನು ಪೋಷಕ-ಶಿಕ್ಷಕರ ಮಹಾಸಭೆ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಗ್ರಾಮದ ಮಕ್ಕಳ ಶಿಕ್ಷಣದ ಪ್ರಗತಿಗೆ ಇಲ್ಲಿನ ಸಮುದಾಯದ ಸಮರ್ಥ ಸಹಭಾಗಿತ್ವ ಮಾದರಿಯಾಗಿದೆ ಎಂದರು.

---

**ಪಾರಂಪರಿಕ ವೈದ್ಯರಿಂದ ಸಿದ್ಧಪಡಿಸಿದ ಕಣ್ಣಿನ ಔಷಧಿ ಹನಿ ಹಾಕುವ ಕಾರ್ಯಕ್ರಮ**

# ಕಣ್ಣು ಅತಿ ಮುಖ್ಯ ಅಂಗ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಚಂಬಣ್ಣ ಬಾಳಿಕಾಯಿ ಇವರ ಮಿಲ್‌ನ ಆವರಣದಲ್ಲಿ ಶುಕ್ರವಾರ ಕರ್ನಾಟಕ ಪಾರಂಪರಿಕ ವೈದ್ಯ ಪರಿಷತ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ, ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ಕರ್ನಾಟಕ ಗ್ರಾಮೀಣಾಭಿವೃದ್ಧಿ, ವಿವಿಧೋದ್ದೇಶಗಳ ಸೇವಾ ಸಂಸ್ಥೆ ಹಾಗೂ ಯೋಗ ಸಾಧಕರ ಸಮಿತಿ ಇವರುಗಳ ಸಂಯುಕ್ತಾಶ್ರಯದಲ್ಲಿ ಪಾರಂಪರಿಕ ಅನುಭವಿ ವೈದ್ಯರಿಂದ ಸಿದ್ಧಪಡಿಸಿದ ಕಣ್ಣಿನ ಔಷಧಿ ಹನಿ ಹಾಕುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮವನ್ನು ಹಿರಿಯರಾದ ಚಂಬಣ್ಣ ಬಾಳಿಕಾಯಿ, ಚನ್ನಪ್ಪ ಕೋಲಕಾರ ಹಾಗೂ ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಅವರು ಧನ್ವಂತರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಮನುಷ್ಯನಿಗೆ ಎಲ್ಲ ಅಂಗಗಳಲ್ಲಿ ಕಣ್ಣು ಅತಿ ಮುಖ್ಯ ಅಂಗವಾಗಿದ್ದು, ಅದರ ಬಗ್ಗೆ ಯಾವಾಗಲೂ ಜಾಗೃತಿ ವಹಿಸುವದು ಅಗತ್ಯವಾಗಿದೆ. ಕಣ್ಣಿಗೆ ಅನೇಕ ಸಮಸ್ಯೆಗಳು ಬರುವದು ಸಹಜ. ಇಂತಹ ಸಂದರ್ಭದಲ್ಲಿ ತಕ್ಷಣದಲ್ಲಿ ಚಿಕಿತ್ಸೆಗೆ ಮುಂದಾಗಬೇಕು. ಕೆಲವು ಜನರಿಗೆ ಕಣ್ಣಿನ ಸಮಸ್ಯೆ ಬಗೆಹರಿಸಿಕೊಳ್ಳಲಾರದ ಕಷ್ಟ ಅನುಭವಿಸುತ್ತಾರೆ. ಅಂತವರು ಇಂತಹ ಶಿಬಿರಗಳಲ್ಲಿ ಪಾಲ್ಗೊಂಡು ಅಲ್ಲಿನ ಯೋಜನೆಗಳ ಲಾಭ ಪಡೆದುಕೊಳ್ಳಬೇಕು. ಪಾರಂಪರಿಕ ವೈದ್ಯರು ತಯಾರಿಸಿದ ಕಣ್ಣಿನ ಔಷಧಿಯನ್ನು ಹಾಕಿಸಿಕೊಳ್ಳುವದರಿಂದ ಕಣ್ಣಿನ ಅನೇಕ ಸಮಸ್ಯೆಗಳು ದೂರವಾಗುವುದಾಗಿ ವೈದ್ಯರು ತಿಳಿಸಿದ್ದು, ಇದನ್ನು ಸರಿಯಾಗಿ ಮುಂದುವರೆಸಿಕೊಂಡು ಹೋದರೆ ಬಡವರಿಗೆ, ಗ್ರಾಮೀಣ ಭಾಗದ ಜನರಿಗೆ ಹೆಚ್ಚು ಉಪಯೋಗವಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಮುಖಂಡರಾದ ಆರ್.ಸಿ. ಬಾಳಿಹಳ್ಳಿಮಠ, ಶಕುಂತಲಾ ಕೋಲಕಾರ, ಪ್ರಕಾಶ ಉಪನಾಳ, ಮಾಲಕ್ಕ ದಂದರಗಿ, ಶಶಿಕಲಾ ವಡಕಣ್ಣವರ, ಶೈಲಾ ಆದಿ, ದಶರಥ ಕೋಟೆಗೌಡ್ರ, ನಾಗರಾಜ ಸೂರಣಗಿ, ಪ್ರಕಾಶ ವಡಕಣ್ಣವರ, ಎಸ್.ಎಸ್. ವಾಲಿಶೆಟ್ಟರ, ಕೊತ್ತಲ ಮಹಾದೇವಪ್ಪ, ಪ್ರವೀಣ ಯರ್ಲಗಟ್ಟಿ ಮುಂತಾದವರಿದ್ದರು.

ಪ್ರಕಾಶ ಮದ್ದಿನ ಪ್ರಾಸ್ತಾವಿಕವಾಗಿ ಮಾತನಾಡಿ, ವೈದ್ಯರ ಬಗ್ಗೆ ಜನರಲ್ಲಿ ಗೌರವಭಾವನೆ ಇದ್ದು, ಅವರು ನೀಡುವ ಔಷಧಿಗಳಿಂದ ತಮ್ಮ ಕಾಯಿಲೆ ಗುಣವಾಗುವದು ಎನ್ನುವ ನಂಬಿಕೆ ಹೊಂದಿರುತ್ತಾರೆ. ಪಾರಂಪರಿಕ ವೈದ್ಯರು ಹಲವಾರು ವರ್ಷಗಳಿಂದ ಕಣ್ಣಿನ ಹನಿ ಹಾಕುವ ಕಾರ್ಯ ಮಾಡುತ್ತಿದ್ದು, ಬಹುತೇಕ ಜನರಿಗೆ ಪ್ರಯೋಜನವಾಗಿದೆ. ಕಣ್ಣಿನ ಪೊರೆ, ಕೆಂಪಗಾಗುವದು, ದೃಷ್ಟಿ ದೋಷ ನಿವಾರಣೆ ಇತ್ಯಾದಿ ಸಮಸ್ಯೆಗಳಿಗೆ ಈ ಸಿದ್ಧ ಔಷಧಿ ಹೆಚ್ಚು ಪರಿಣಾಮಕಾರಿಯಾಗಿದೆ ಎಂದರು.

---

# ಪಿಎಸ್‌ಐ ರಿತ್ತಿಯವರನ್ನು ಜಿಲ್ಲೆಯಿಂದ ವರ್ಗಾಯಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಪೊಲೀಸ್ ಠಾಣೆಯ ಪಿಎಸ್‌ಐ ಈರಪ್ಪ ರಿತ್ತಿ ಅವರು ಹಿಂದೂಗಳ ಮೇಲೆ ವಿನಾಕಾರಣ ಸುಳ್ಳು ಪ್ರಕರಣಗಳನ್ನು ದಾಖಲಿಸುತ್ತಿದ್ದು, ಅವರ ಮೇಲೆ ಮೇಲಾಧಿಕಾರಿಗಳು ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಶ್ರೀರಾಮಸೇನಾ ಕಾರ್ಯಕರ್ತರು ಲಕ್ಷ್ಮೇಶ್ವರದಲ್ಲಿ ಶುಕ್ರವಾರ ತಹಸೀಲ್ದಾರರಿಗೆ ಮನವಿ ಅರ್ಪಿಸಿದರು.

ಈ ವೇಳೆ ಮಾತನಾಡಿದ ಶ್ರೀರಾಮಸೇನಾ ಮುಖಂಡರು, ಮನೆಯಲ್ಲಿದ್ದ ದೇವಿಹಾಳ ತಾಂಡಾದ ಸೋಮಪ್ಪ ಲಮಾಣಿ ಎಂಬ ವ್ಯಕ್ತಿಯ ಮೇಲೆ ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ಸುಳ್ಳು ಪ್ರಕರಣ ದಾಖಲಿಸಿ ಮನಸೋಇಚ್ಛೆ ಥಳಿಸಿದ್ದರಿಂದ ಆತ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವಂತಾಗಿದೆ. ಪಿಎಸ್‌ಐ ಈರಣ್ಣ ರಿತ್ತಿ ಅವರು ಕಂಡ ಕಂಡವರ ಮೇಲೆವಿನಾಕಾರಣ ದೌರ್ಜನ್ಯ ನಡೆಸಿ ಜಾತಿ ನಿಂದನೆ ಮಾಡಲು ಇವರಿಗೆ ಯಾರು ಅಧಿಕಾರ ನೀಡಿದ್ದಾರೆ ಎಂದು ಪ್ರಶ್ನಿಸಿದರು. ಈ ಹಿಂದೆ ಇದೇ ಪಿಎಸ್‌ಐ ರಿತ್ತಿಯವರು ಲಕ್ಷ್ಮೇಶ್ವರದಲ್ಲಿ ನವರಾತ್ರಿ ಸಂದರ್ಭದಲ್ಲಿ ಗೋಸಾವಿ ಕುಟುಂಬದವರ ಮೇಲೆ ವಿನಾಕಾರಣ ಲಾಠಿಚಾರ್ಜ್ ನಡೆಸಿದಾಗ ಅನೇಕ ಹಿಂದೂ ಪರ ಸಂಘಟನೆಗಳು ಅವರ ಅಮಾನತ್ತಿಗಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸಿರುವದನ್ನು ಇಲ್ಲಿ ಸ್ಮರಿಸಬಹುದಾಗಿದೆ ಎಂದು ಹೇಳಿದರು.

ಇದೀಗ ಮತ್ತೆ ಮುಗ್ಧ ಲಂಬಾಣಿ ವ್ಯಕ್ತಿಯ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಜಾತಿ ನಿಂದನೆ ಮಾಡಿರುವ ಜನವಿರೋಧಿ, ಹಿಂದೂ ವಿರೋಧಿಯಾಗಿರುವ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಜಿಲ್ಲೆಯಿಂದ ವರ್ಗಾಯಿಸಲು ಸರಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಒತ್ತಾಯಿಸಿದರು.

ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಮನವಿ ಸ್ವೀಕರಿಸಿದರು. ಈ ವೇಳೆ ಶ್ರೀರಾಮ ಸೇನಾ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ, ಬಾಳಪ್ಪ ಗೋಸಾವಿ, ಬಸವರಾಜ ಚಕ್ರಸಾಲಿ, ಹರೀಶ ಗೋಸಾವಿ, ಬಸವರಾಜ ಆಲೂರ, ಆದೇಶ ಸವಣೂರ, ಕುಮಾರ ಕಣವಿ, ಪ್ರಾಣೇಶ ವ್ಯಾಪಾರಿ, ಪ್ರವೀಣ ಗುಡಗೇರಿ, ಹನುಮಂತ ರಾಮಗೇರಿ, ಕಿರಣ ಚಿಲ್ಲೂರಮಠ, ವೆಂಕಟೇಶ ಗೋಸಾವಿ, ವಿನಾಯಕ ಸಪಡ್ಲ, ಪ್ರಕಾಶ ಕುಂಬಾರ, ಪವನ ಹಗರದ, ಆಕಾಶ ಕುಂಬಾರ, ಈರಣ್ಣ ಕುಂಬಾರ, ಚಿನ್ನು ಹಾಳದೋಟದ, ಕೃಷ್ಣ ಗೋಸಾವಿ ಮುಂತಾದವರಿದ್ದರು.

---

# ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಶ್ವ ಮಧುಮೇಹ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದು ಒತ್ತಡದ ಜೀವನದಲ್ಲಿ ಪ್ರತಿಯೊಬ್ಬರಲ್ಲಿ ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಉಲ್ಬಣಗೊಂಡು ಜನರು ಆರೋಗ್ಯ ಹದಗೆಡುತ್ತಿರುವುದರಿಂದ 30 ವರ್ಷ ಮೇಲ್ಪಟ್ಟವರಲ್ಲಿ ಟೈಪ್-1 ಮಧುಮೇಹವನ್ನು ತಡೆಗಟ್ಟಲು ಸಾಧ್ಯವಿಲ್ಲ. ಆದರೆ, ಇನ್ಸೂಲಿನ ನಿರ್ವಹಣೆ ಮಾಡಬಹುದು. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಜೀವನಶೈಲಿಯನ್ನು ಬದಲಾಣೆ ಮಾಡಿಕೊಳ್ಳುವುದು ಮತ್ತು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುರಿಂದ ದೈಹಿಕ ಮತ್ತು ಮಾನಸಿಕ ತೊಂದರೆಗಳನ್ನು ತಡೆಗಟ್ಟಲು ಸಾಧ್ಯ ಎಂದು ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ. ಶರ್ಮಿಳಾ ಹೇಳಿದರು

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೆ.ಹೆಚ್.ಪಾಟೀಲ್ ವೈದ್ಯಕೀಯ ವಿಜ್ಞಾನ ಸಂಸ್ಥೆ ಗದಗ, ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ವಿಶ್ವ ಮಧುಮೇಹ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಎನ್.ಲಿಂಗದಾಳ ಮಾತನಾಡಿ, ಅಧಿಕ ರಕ್ತದೊತ್ತಡ ನಿಯಂತ್ರಣಕ್ಕೆ ಉಚಿತ ಆರೋಗ್ಯ ತಪಾಸಣೆ ಮತ್ತು ವೈದ್ಯಕಿಯ ಔಷಧೋಪಚಾರ ಗೃಹ ಆರೋಗ್ಯ ಯೋಜನೆಯ ಮೂಲಕ ಮಾಡಲಾಗುತ್ತಿದ್ದು, ಸದುಪಯೋಗವನ್ನು ಪಡೆಯಬೇಕು. ತಂಬಾಕು, ಮದ್ಯಸೇವೆ ಆರೋಗ್ಯಕ್ಕೆ ಹಾನಿಕರವಾಗಿದ್ದು, ಅವುಗಳಿಂದ ದೂರವಿರಿ ಮತ್ತು ಪೌಷ್ಠಿಕ ಆಹಾರಗಳ ಸೇವನೆ, ಯೋಗ, ವ್ಯಾಯಾಮಗಳನ್ನು ರೂಢಿಸಿಕೊಂಡು ಆರೋಗ್ಯ ಸಂಪತ್ತನ್ನು ಪಡೆಯಬೇಕೆಂದು ಮನವಿ ಮಾಡಿದರು.

ಮಧುಮೇಹ ನಿಯಂತ್ರಣ ಕುರಿತು ಡಾ. ಶ್ರಾವಣಿ, ಡಾ. ಸಿದ್ದಾರ್ಥ, ಡಾ. ಶ್ರೀಕಾಂತ ಉಪನ್ಯಾಸ ನೀಡಿದರು. ಅಧ್ಯಕ್ಷತೆಯನ್ನು ಡಾ. ವರ್ಷಾ ಬ್ಯಾಲಿಹಾಳ ವಹಿಸಿದ್ದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಾಯ್. ಎನ್. ಕಡೇಮನಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರಯೋಗಶಾಲಾ ತಂತ್ರಜ್ಞರಾದ ವಂದನಾ ಠಾಕೂರ, ಶುಶ್ರೂಷಣಾಧಿಕಾರಿ ಆರೀಪಾ ಕಿರಟಗೇರಿ, ನೇತ್ರಾಧಿಕಾರಿ ಕೋಡೆಕಲ್ಲ್ ಸಂಗೀತಾ ಕುಲಕರ್ಣಿ, ಶಶಿಕಲಾ ಹಡಪದ, ಪಾರ್ವತಿ ವಜ್ರಮಟ್ಟಿ, ಸವಿತಾ ಬಣವಿ, ಸಲ್ಮಾ ಕುಕನೂರ ಮುಂತಾದವರು ಉಪಸ್ಥಿತರಿದ್ದರು.

---

# ಬಿಹಾರದಲ್ಲಿ ಕಟ್ಟಾ ಸರ್ಕಾರ್ ಇನ್ನೆಂದಿಗೂ ಬರುವುದಿಲ್ಲ: ಪ್ರಧಾನಿ ನರೇಂದ್ರ ಮೋದಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಹಾರದಲ್ಲಿ ಕಟ್ಟಾ ಸರ್ಕಾರ್ (ಬಂದೂಕು ಹಿಡಿದ ಸರ್ಕಾರ) ಇನ್ನೆಂದಿಗೂ ಬರೋದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬಿಹಾರದಲ್ಲಿ ಎನ್‌ಡಿಎ ಪ್ರಚಂಡ ವಿಜಯ ಸಾಧಿಸಿದ ವಿಚಾರವಾಗಿ ಮಾತನಾಡಿದ ಅವರು, ನಾನು ಚುನಾವಣೆ ವೇಳೆ ಜಂಗಲ್ ರಾಜ್ ಮತ್ತು ಕಟ್ಟಾ ಸರ್ಕಾರ್ ಬಗ್ಗೆ ಮಾತನಾಡಿದಾಗೆಲ್ಲ ಆರ್‌ಜೆಡಿಯಿಂದ ಯಾವುದೇ ವಿರೋಧ ಕೇಳಿಬರುತ್ತಿರಲಿಲ್ಲ. ಆದ್ರೆ ಕಾಂಗ್ರೆಸ್‌ಗೆ ಮಾತ್ರ ನೋವುಂಟಾಗಿತ್ತು. ನಾನು ಮತ್ತೆ ಹೇಳುವೆ ಬಿಹಾರದಲ್ಲಿ ಕಟ್ಟಾ ಸರ್ಕಾರ್ ಇನ್ನೆಂದಿಗೂ ಬರಲ್ಲ ಎಂದು ನುಡಿದರು.

---

# ಮನೆ ಬಳಿಯ ಮರಕ್ಕೆ ನೇಣು ಬಿಗಿದುಕೊಂಡು ಯುವತಿ ಸೂಸೈಡ್!

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ತೀರ್ಥಹಳ್ಳಿ ತಾಲೂಕಿನ ಬೆಜ್ಜವಳ್ಳಿ ಸಮೀಪದ ಬಚ್ಚನಕೂಡಿಗೆಯಲ್ಲಿ ಯುವತಿಯೊಬ್ಬಳು ಮನೆ ಬಳಿಯ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಜರುಗಿದೆ.

ಪ್ರಾಪ್ತಿ (21) ಆತ್ಮಹತ್ಯೆಗೆ ಶರಣಾದ ಯುವತಿ.

ಆಕೆ ತೀರ್ಥಹಳ್ಳಿಯ ಬಾಳೆಬಯಲು ಸರ್ಕಾರಿ ಪದವಿ ಕಾಲೇಜಿನ ತೃತೀಯ ಬಿಬಿಎ ವ್ಯಾಸಾಂಗ ಮಾಡುತ್ತಿದ್ದಳು. ಆತ್ಮಹತ್ಯೆಗೆ ಕಾರಣ ತಿಳಿದುಬಂದಿಲ್ಲ.

---

**ಶಿಗ್ಲಿ ನಾಕಾ ಬಳಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದ ಬಿಜೆಪಿ ಕಾರ್ಯಕರ್ತರು**

# ವಿರೋಧಿಗಳನ್ನು ಮೂಲೆಗುಂಪು ಮಾಡಿದ ಮತದಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ನಿರೀಕ್ಷೆಗೂ ಮೀರಿ ದಿಗ್ವಿಜಯ ಸಾಧಿಸುವ ಮೂಲಕ ವಿರೋಧಿಗಳ ಕೂಟವನ್ನು ಸಂಪೂರ್ಣವಾಗಿ ತಿರಸ್ಕರಿಸಿದ್ದಾರೆ ಎಂದು ಬಿಜೆಪಿ ಶಿರಹಟ್ಟಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಹಿರಿಯ ಮುಖಂಡ ಪೂರ್ಣಾಜಿ ಖರಾಟೆ ಹೇಳಿದರು.



ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ಅಭೂತಪೂರ್ವ ಗೆಲುವು ಸಾಧಿಸುತ್ತಿದ್ದಂತೆ ಶುಕ್ರವಾರ ಸಂಜೆ ಪಟ್ಟಣದ ಶಿಗ್ಲಿ ನಾಕಾ ಬಳಿ ನೂರಾರು ಬಿಜೆಪಿ ಕಾರ್ಯಕರ್ತರು ಜಮಾಯಿಸಿ ಪಟಾಕಿ ಸಿಡಿಸಿ ಪರಸ್ಪರ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದ ಸಂದರ್ಭದಲ್ಲಿ ಅವರು ಮಾತನಾಡಿದರು. ವೋಟ್ ಚೋರಿ ಬಗ್ಗೆ ರಾಹುಲ್ ಗಾಂಧಿ ಅವರು ದೇಶದಲ್ಲಿ ಮಾತ್ರವಲ್ಲ ವಿದೇಶದಲ್ಲೂ ಆರೋಪ ಮಾಡುತ್ತಿದ್ದಾರೆ. ಕಾಂಗ್ರೆಸ್ ಅಧಿಕಾರ ಹಿಡಿದ ಕರ್ನಾಟಕ ಹಾಗೂ ತೆಲಂಗಾಣ ಹೊರತುಪಡಿಸಿ ಅವರು ಸೋಲು ಕಂಡ ಕಡೆಗಳಲ್ಲೆಲ್ಲ ಮಾತ್ರ ಮತ ಚೋರಿ ಆಗುತ್ತಿದೆ ಎನ್ನುವ ಹುಚ್ಚುತನದ ಹೇಳಿಕೆಯನ್ನು ಜನ ನಂಬುವುದಿಲ್ಲ. ಪ್ರಧಾನಿ ಮೋದಿ, ಅಮಿತ್ ಶಾ, ಯೋಗಿ ಆದಿತ್ಯನಾಥ ಹಾಗೂ ಅನೇಕ ಹಿರಿಯ ಮುಖಂಡರ ನೇತೃತ್ವದಲ್ಲಿ ಅಭೂತಪೂರ್ವ ಗೆಲುವು ಸಾಧಿಸುವ ಮೂಲಕ ಮುಂದಿನ ಚುನಾವಣೆಯಲ್ಲಿಯೂ ಬಿಜೆಪಿ ಅಧಿಕಾರಕ್ಕೆ ಬರುವ ಸ್ಪಷ್ಟ ನಿರ್ಧಾರ ಘೋಷಿಸಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ವೋಟ್ ಚೋರಿ ಎಂದು ಹೇಳುತ್ತಾ ಜನರ ದಿಕ್ಕು ತಪ್ಪಿಸುವ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಹೇಳಿಕೆಯನ್ನು ಮತದಾರರು ತಿರಸ್ಕರಿಸಿ ವಿರೋಧಿಗಳನ್ನು ಮೂಲೆಗುಂಪು ಮಾಡಿದ್ದಾರೆ. ಕಾಂಗ್ರೆಸ್ ಪಕ್ಷ ಮಹಾಘಟಬಂಧನದಲ್ಲಿ ಸಿಲುಕಿ ಕಣ್ಣಿಗೆ ಕಾಣದಷ್ಟು ದೂರ ಹೋಗಿದೆ ಎಂದು ಮುಂಖಂಡರು ಟೀಕಿಸಿದರು.

ಸೇರಿದ್ದ ನೂರಾರು ಕಾರ್ಯಕರ್ತರು ಮೋದಿ, ಅಮಿತ್ ಶಾ, ಬಿಜೆಪಿ ಹೆಸರಿನಲ್ಲಿ ಘೋಷಣೆ ಕೂಗಿ ಸಂತಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಆರ್.ವಿ. ವರ್ಣೇಕರ, ಅನಿಲ ಮುಳಗುಂದ, ಎಂ.ಆರ್. ಪಾಟೀಲ್, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ಶಕ್ತಿ ಕತ್ತಿ, ಡಿ.ವೈ. ಹುನಗುಂದ, ನವೀನ ಹಿರೇಮಠ, ಮಂಜುನಾಥ ಹೊಗೆಸೊಪ್ಪಿನ, ಬಾಬಣ್ಣ ವರ್ಣೇಕರ, ಭೀಮಣ್ಣ ಯಂಗಾಡಿ, ಅಶೋಕ ಶಿರಹಟ್ಟಿ, ವಾಸು ಬೋಮಲೆ, ಜಗದೀಶಗೌಡ ಪಾಟೀಲ, ವಿಜಯ ಕುಂಬಾರ, ಕಿರಣ ಲಮಾಣಿ, ವೀರಣ್ಣ ಅಕ್ಕೂರ, ರಾಮು ಪೂಜಾರ, ನಿಂಗಪ್ಪ ಮಡಿವಾಳರ, ಉಳವೇಶಗೌಡ ಪಾಟೀಲ, ಜ್ಞಾನಬೋ ಬೋಮಲೆ, ನಿಂಗಪ್ಪ ಪ್ಯಾಟಿ, ರುದ್ರಪ್ಪ ಉಮಚಗಿ, ಬಸವರಾಜ ಕಲ್ಲೂರ, ಮುತ್ತಣ್ಣ ಚೋಟಗಲ್ ಸೇರಿ ನೂರಾರು ಕಾರ್ಯಕರ್ತರು ಇದ್ದರು.

ಪರಿಸರ ಚಿಂತಕಿ ಪದ್ಮಶ್ರೀ ಸಾಲುಮರದ ತಿಮ್ಮಕ್ಕನವರ ಅಗಲಿಕೆ ಹಾಗೂ ದೆಹಲಿ ಬಾಂಬ್ ಸ್ಫೋಟದಲ್ಲಿ ಬಲಿಯಾದವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka